ಸಂಪುಟ: 21, ಸಂಚಿಕೆ: 314, ಪುಟಗಳು: 8, ಬುಧವಾರ, 21 ಆಗಸ್ಟ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS | PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines



### ಸುಭಾಷಿತ

ಪ್ರಾಮಾಣಿಕರಿಗೆ ಜೀವನವೇ ಒಂದು ಹೋರಾಟ. ಆದರೂ ಅದರಿಂದ ವಿಮುಖರಾಗಬಾರದು.

। ಸ್ವಾಮಿ ವಿವೇಕಾನಂದ

### ಪಂಚಾಂಗ

(ಬುಧವಾರ 21, ಆಗಸ್ಟ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ವರ್ಷ ಋತು,
- ಶ್ರಾವಣ ಮಾಸ, ಕೃಷ್ಣ ಪಕ್ಷ,
- ದ್ವಿತೀಯ ತಿಥಿ, ಪೂರ್ವಭಾದ್ರ ನಕ್ಷತ್ರ
- ರಾಹುಕಾಲ ? 12:26 ರಿಂದ 01:59
- ಗುಳಿಕಕಾಲ ? 10:52 ರಿಂದ 12:26
- ಯಮಗಂಡಕಾಲ ? 07:45 ರಿಂದ 09.19

## ಸಂಕ್ಷಿಪ್ತ ಸುದ್ದಿ

### ನಮ್ಮ ಮೆಟ್ರೋ ಇಲ್ಲದೆ ಜನರ ಪರದಾಟ



**ಬೆಂಗಳೂರು:** ನಾಗಸಂದ್ರ ಟು ಸಿಲ್ಕ್ ಇನ್ಸ್ಟಿಟ್ಯೂಟ್ ವರೆಗಿನ ಹಸಿರು ಮಾರ್ಗದ ಮುಂದುವರಿದ ಭಾಗವಾಗಿ, ನಾಗಸಂದ್ರ ಟು ಮಾದಾವರ ವರೆಗೆ ಮೆಟ್ರೋ ಸಂಚಾರವನ್ನು ವಿಸ್ತರಣೆ ಮಾಡಲು ಮುಂದಾಗಿದೆ. ಈ ಹಿನ್ನೆಲೆಯಲ್ಲಿ ಆ ಮಾರ್ಗದಲ್ಲಿ ಸಿಗ್ನಲ್ ಟೆಸ್ಟಿಂಗ್ ಮಾಡಲಾಗ್ತಿದೆ. ಆದ್ದರಿಂದ ನಾಗಸಂದ್ರ ಟು ಪೀಣ್ಯ ಇಂಡಸ್ಟ್ರಿ ಮೆಟ್ರೋ ಸ್ಟೇಷನ್ ವರೆಗೆ ದಿನಪೂರ್ತಿ ಮೆಟ್ರೋ ಸಂಚಾರವಿಲ್ಲ. ಇದರಿಂದ ಬೆಳಗ್ಗೆ ಕೆಲಸಕ್ಕೆ ಹೋಗಬೇಕಾದ ಪ್ರಯಾಣಿಕರು ಪರದಾಡ್ತಿದ್ದಾರೆ. ಮೆಟ್ರೋ ಸ್ಟೇಷನ್ ಬಳಿ ನಿಂತು ಓಲಾ, ಉಬರ್ ಮೂಲಕ ಆಟೋ ಕ್ಯಾಬ್ ಬುಕ್ ಮಾಡಲು ಮುಂದಾಗಿದ್ದಾರೆ. ಆದರೆ ಇದನ್ನು ಬಂಡವಾಳ ಮಾಡಿಕೊಂಡ ಆಟೋ, ಕ್ಯಾಬ್ ಚಾಲಕರು ಜನರಿಂದ ದುಪ್ಪಟ್ಟು ಹಣ ವಸೂಲಿ ಮಾಡಲು ಮುಂದಾಗಿದ್ದಾರೆ. ಪುಟ 2

### ಟಿಬಿ ಡ್ಯಾಂ ಒಳಹರಿವು ಹೆಚ್ಚಳ 4 ದಿನಗಳಲ್ಲಿ ಹರಿದು ಬಂತು 7 ಟಿಎಂಸಿ ನೀರು



**ಕೊಪ್ಪಳ:** ತುಂಗಭದ್ರಾ ಜಲಾಶಯದ 19ನೇ ಕ್ರಸ್ಟ್‌ಗೇಟ್ ಕೊಚ್ಚಿಕೊಂಡು ಹೋಗಿದ್ದು ದೊಡ್ಡ ಮಟ್ಟದ ಆತಂಕವನ್ನು ಹೆಚ್ಚಿಸಿತ್ತು. ಆದರೆ ವಾರದ ನಂತರ ಜಲಾಶಯಕ್ಕೆ ಸ್ಟಾಪ್ ಲಾಗ್‌ಗೇಟ್ ಅಳವಡಿಸುವಲ್ಲಿ ಸಿಬ್ಬಂದಿ ಯಶಸ್ವಿಯಾಗಿದ್ದರು. ಸದ್ಯ ಡ್ಯಾಂ ಗೆ ಒಳಹರಿವು ಹೆಚ್ಚಾಗ್ತಿದ್ದು, ಕಳೆದ 4 ದಿನಗಳಲ್ಲಿ 7 ಟಿಎಂಸಿ ನೀರು ಹರಿದು ಬಂದಿದೆ. ಮತ್ತೊಮ್ಮೆ ಡ್ಯಾಂ ತುಂಬುವ ಭರವಸೆ ಮೂಡಿದೆ. ಕೊಪ್ಪಳ ತಾಲೂಕಿನ ಮುನಿರಾಬಾದ್ ಬಳಿಯಿರುವ ಜಲಾಶಯದಿಂದ ಒಂದೇ ವಾರದಲ್ಲಿ 41 ಟಿಎಂಸಿಗೂ ಹೆಚ್ಚು ನೀರು ವ್ಯರ್ಥವಾಗಿ ಹರಿದು ಹೋಗಿತ್ತು. ಪುಟ 2

## ತಮಿಳುನಾಡಿನ ಶ್ರೀರಂಗಂನ ದೇವಸ್ಥಾನದ ಶೇಷವಸ್ತ್ರ ರಾಯರಿಗೆ ಅರ್ಪಣೆ



**ಮಂತ್ರಾಲಯ:** ಕಲಿಯುಗದ ಕಾಮದೇನು ಮಂತ್ರಾಲಯದ ಶ್ರೀ ಗುರು ರಾಘವೇಂದ್ರ ಪ್ರಭುಗಳ 353ನೇ ಆರಾಧನಾ ಮಹೋತ್ಸವ ನಡೆಯುತ್ತಿದೆ. ರಾಯರ ದರ್ಶನ ಮತ್ತು ಆರಾಧನೆ ವೀಕ್ಷಣೆಗೆ ಸಾವಿರಾರು ಭಕ್ತರು ಆಗಮಿಸುತ್ತಿದ್ದಾರೆ.

ಶ್ರೀ ರಾಘವೇಂದ್ರ ಸ್ವಾಮಿಗಳವರ ಆರಾಧನೆಯ ಸುಸಂದರ್ಭದಲ್ಲಿ ಮಂಗಳವಾರ ತಮಿಳುನಾಡಿನ ಶ್ರೀರಂಗ ಕ್ಷೇತ್ರದ ಅರ್ಚಕರು ಶ್ರೀರಂಗಂ ದೇವಸ್ಥಾನದಿಂದ ಶೇಷವಸ್ತ್ರವನ್ನು ತಂದರು. ಅರ್ಚಕರನ್ನು ಮಹಾದ್ವಾರದಲ್ಲಿ ಪೀಠಾಧಿಪತಿ ಡಾ.ಸುಬುಧೇಂದ್ರ ತೀರ್ಥ ಶ್ರೀಪಾದರು ಸ್ವಾಗತಿಸಿ, ಭವ್ಯ ಮೆರವಣಿಗೆ ಮೂಲಕ ಮಠಕ್ಕೆ ಕರೆತಂದರು. ನಂತರ ಶ್ರೀ ರಾಘವೇಂದ್ರ ಸ್ವಾಮಿಗಳಿಗೆ ಶ್ರೀಗಳು ಶೇಷವಸ್ತ್ರ ಅರ್ಪಿಸಿದರು. ನಂತರ ಶ್ರೀರಂಗಂ ದೇವಸ್ಥಾನದ ಅರ್ಚಕರು ಪೂಜ್ಯ ಸ್ವಾಮೀಜಿ ಅವರಿಗೆ ಪ್ರಸಾದ ಹಾಗೂ ಶೇಷವಸ್ತ್ರ ಅರ್ಪಿಸಿದರು. ಪುಟ 2







## ಸಿದ್ದರಾಮಯ್ಯ ಪರ ಕಾಂಗ್ರೆಸ್ ಹೈಕಮಾಂಡ್ ಬಳಿ ವಾದ ಮಂಡಿಸಲು

# ಅತ್ಯಾಪ್ತ ಸಚಿವರ ಸಿದ್ಧತೆ

**ಬೆಂಗಳೂರು:** ಮುಡಾ ಹಗರಣದಲ್ಲಿ ಪ್ರಾಸಿಕ್ಯೂಷನ್ ಗೆ ರಾಜ್ಯಪಾಲರು ಅನುಮತಿ ನೀಡಿದರೂ ಹೈಕೋರ್ಟ್ ನಿಂದ ತಾತ್ಕಾಲಿಕ ರಿಲೀಫ್ ಪಡೆದಿರುವ ಸಿಎಂ ಸಿದ್ದರಾಮಯ್ಯ ಶುಕ್ರವಾರ ದೆಹಲಿಗೆ ತೆರಳಿ ಕಾಂಗ್ರೆಸ್ ಹೈಕಮಾಂಡ್ ನಾಯಕರನ್ನು ಭೇಟಿಯಾಗಲಿದ್ದಾರೆ. ಈ ಮಧ್ಯೆ, ಸಿದ್ದರಾಮಯ್ಯ ಪರ ಹೈಕಮಾಂಡ್ ಬಳಿ ಪ್ರಬಲ ವಾದ ಮಂಡಿಸಲು ಅವರ ಆಪ್ತ ಸಚಿವರು ಸಿದ್ಧತೆ ಮಾಡಿಕೊಂಡಿದ್ದಾರೆ.

**ಸಿದ್ದರಾಮಯ್ಯ ಆಪ್ತ ಸಚಿವರ ವಾದವೇನು?:** ಕರ್ನಾಟಕದ ಕಾಂಗ್ರೆಸ್ ಪಕ್ಷದ ಭವಿಷ್ಯದ ಕಾರಣಕ್ಕೆ ಸಿದ್ದರಾಮಯ್ಯ ಅನಿವಾರ್ಯ. ಹೀಗಾಗಿ ಸಿಎಂ ಹೈಕಮಾಂಡ್ ಅವರ ಪರ ಸ್ಟ್ರಾಂಗ್ ಆಗಿ ನಿಲ್ಲಬೇಕು. ಇಲ್ಲವಾದಲ್ಲಿ ಕರ್ನಾಟಕದ ಬಳಿಕ ತೆಲಂಗಾಣದ ಸರ್ಕಾರಕ್ಕೂ ಸಂಕಷ್ಟ ತರುತ್ತಾರೆ ಎಂದು ಸಿದ್ದರಾಮಯ್ಯ ಆಪ್ತ ಸಚಿವರು ವಾದಿಸುತ್ತಿದ್ದಾರೆ.



ಒಂದು ವೇಳೆ ಸಿಎಂ ವಿರುದ್ಧ ಎಫ್‌ಐಆರ್ ದಾಖಲಾದರೂ, ತನಿಖೆ ಶುರು ಮಾಡಿದರೂ ಹೈಕಮಾಂಡ್ ಅವರ ಪರ ನಿಲ್ಲಬೇಕು. ಯಾವುದೇ ಕಾರಣಕ್ಕೂ ಸಿಎಂ ಬದಲಾವಣೆ ಮಾಡಬಾರದು ಎಂದು ಸಚಿವರು ವಾದಿಸುತ್ತಿರುವುದಾಗಿ ಮೂಲಗಳು ತಿಳಿಸಿವೆ. ಪುಟ 2

## ಮೈಸೂರು ದಸರಾ ಗಜಪಡೆಗೆ 1 ಕೋಟಿ ರೂ.ಗೂ ಹೆಚ್ಚು ಮೊತ್ತದ ವಿಮೆ ಅರಣ್ಯ ಇಲಾಖೆ ನಿರ್ಧಾರ!

**ಬೆಂಗಳೂರು:** ಮೈಸೂರು ದಸರಾ ಮಹೋತ್ಸವಕ್ಕೆ ದಿನಗಣನೆ ಆರಂಭವಾಗಿದೆ. ದಸರಾ ಗಜಪಡೆ ಇಂದು ಮೈಸೂರಿಗೆ ಆಗಮಿಸುತ್ತಿದ್ದು, ಮೈಸೂರು ಜಿಲ್ಲೆ ಹುಣಸೂರು ತಾಲೂಕಿನ ವೀರನಹೊಸಹಳ್ಳಿಯಲ್ಲಿ ಕ್ಯಾಪ್ಟನ್ ಅಭಿಮನ್ಯು ಹಾಗೂ ತಂಡಕ್ಕೆ ಸ್ವಾಗತ ದೊರೆಯಲಿದೆ. ಈ ಮಧ್ಯೆ, ದಸರಾ ಗಜಪಡೆ ವಿಚಾರದಲ್ಲಿ ಮಹತ್ವದ ನಿರ್ಧಾರ ಕೈಗೊಂಡಿರುವ ಅರಣ್ಯ ಇಲಾಖೆ ಗಜಪಡೆ, ಸಿಬ್ಬಂದಿ ಹಾಗೂ ಸಾರ್ವಜನಿಕ ಆಸ್ತಿಪಾಸ್ತಿಗಳಿಗೆ ವಿಮೆ ಮಾಡಿಸಿದೆ. ಪುಟ 2



## ಸಾಕ್ಷ್ಯ ನೀಡಿದ್ರೆ ಝಾಕೀರ್ ನಾಯ್ಕ್ ಭಾರತಕ್ಕೆ ಹಸ್ತಾಂತರ

**ನವದೆಹಲಿ:** ಸಾಕ್ಷ್ಯಾಧಾರಗಳನ್ನು ಒದಗಿಸಿದರೆ ವಿವಾದಿತ ಇಸ್ಲಾಮಿಕ್ ಬೋಧಕ ಝಾಕೀರ್ ನಾಯ್ಕ್ ವಿರುದ್ಧ ಹಸ್ತಾಂತರಿಸಬೇಕೆಂಬ ಭಾರತದ ಮನವಿಯನ್ನು ನಮ್ಮ ಸರ್ಕಾರ ಪರಿಗಣಿಸಬಹುದು ಎಂದು ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ ಹೇಳಿದ್ದಾರೆ.

2022 ರಲ್ಲಿ ಪ್ರಧಾನ ಮಂತ್ರಿ ಹುದ್ದೆ ಸ್ವೀಕರಿಸಿದ ನಂತರ ಮೊದಲ ಬಾರಿಗೆ ಅನ್ವರ್ ಇಬ್ರಾಹಿಂ ಮೂರು ದಿನಗಳ ಭಾರತ ಪ್ರವಾಸ ಕೈಗೊಂಡಿದ್ದಾರೆ.

ಮಂಗಳವಾರ ಇಂಡಿಯನ್ ಕೌನ್ಸಿಲ್ ಆಫ್ ವರ್ಲ್ಡ್ ಅಫೇರ್ಸ್‌ನಲ್ಲಿ ನಡೆದ ಅಧಿವೇಶನದಲ್ಲಿ ಝಾಕೀರ್ ನಾಯ್ಕ್ ಸಂಬಂಧಿಸಿದಂತೆ ಕೇಳಲಾದ ಪ್ರಶ್ನೆಗೆ, ಈ ಸಮಸ್ಯೆ ದೇಶದ ನಡುವಿನ ದ್ವಿಪಕ್ಷೀಯ ಸಂಬಂಧದ ಮೇಲೆ ಪರಿಣಾಮ ಬೀರದಿರಲಿ ಎಂದು ತಿಳಿಸಿದರು. ಪುಟ 2



## ಅಂಗಡಿ ಬಳಿ ಕುಳಿತಿದ್ದ ಆರ್‌ಜೆಡಿ ನಾಯಕನಿಗೆ ಗುಂಡಿಕ್ಕಿ ಹತ್ಯೆ

**ಪಾಟ್ನಾ:** ಮೊದಲ ಬಾರಿಗೆ ಚುನಾಯಿತರಾಗಿದ್ದ ಕೌನ್ಸಿಲರ್, ಆರ್ ಜೆಡಿ ನಾಯಕನನ್ನು ಬೈಕ್‌ನಲ್ಲಿ ಬಂದ ಗುಂಪೊಂದು ಗುಂಡಿಕ್ಕಿ ಹತ್ಯೆ ಮಾಡಿರುವ ಘಟನೆ ಬಿಹಾರ್‌ನಲ್ಲಿ ನಡೆದಿದೆ.

ಸ್ಥಳೀಯ ಕೌನ್ಸಿಲರ್ ಪಂಕಜ್ ರೈ ಹತ್ಯೆಯಾದವರು. ಮಂಗಳವಾರ ಸಂಜೆ ಬಿಹಾರದ ಹಾಜಿಪುರದಲ್ಲಿರುವ ತಮ್ಮ ನಿವಾಸದ ಬಳಿಯ ಬಟ್ಟೆ ಅಂಗಡಿಯಲ್ಲಿ ಕುಳಿತಿದ್ದರು. ದ್ವಿಚಕ್ರವಾಹನದಲ್ಲಿ ಬಂದ ಮೂವರು ರೈ ಮೇಲೆ ಮನಬಂದಂತೆ ಗುಂಡು ಹಾರಿಸಿದ್ದಾರೆ.

ಹಾಜಿಪುರದ ವಾರ್ಡ್ ನಂ.5 ರಲ್ಲಿ ಮೊದಲ ಬಾರಿಗೆ ಚುನಾಯಿತರಾದ ಕೌನ್ಸಿಲರ್ ಮತ್ತು ಲಾಲು ಪ್ರಸಾದ್ ಯಾದವ್ ಅವರ ರಾಷ್ಟ್ರೀಯ ಜನತಾ ದಳ ಸದಸ್ಯ ರೈ ಆತ್ಮರಕ್ಷಣೆಗೆ ಮನೆ ಕಡೆ ಓಡಿದರು. ಆದಾಗ್ಯೂ, ದಾಳಿಕೋರರು ಹಿಂಬಾಲಿಸಿ ಗುಂಡಿನ ದಾಳಿ ನಡೆಸಿದ್ದಾರೆ. ಪುಟ 2



## ಗದಗ-ಬೆಟಗೇರಿ ನಗರಸಭೆ ನೂರಾರು ಕೋಟಿ ಹಗರಣದ ತನಿಖೆ ಆರಂಭ

# ಬಂಧನ ಭೀತಿಯಿಂದ ಅಧ್ಯಕ್ಷೆ, ಸದಸ್ಯರು ಎಸ್ಕೇಪ್

**ಗದಗ:** ಗದಗ-ಬೆಟಗೇರಿ ನಗರಸಭೆ ಆಸ್ತಿ ಲೀಜ್ ಪ್ರಕರಣ ಅವಳಿ ನಗರದಲ್ಲಿ ಭಾರಿ ಸದ್ದು ಮಾಡಿದೆ. ಸದ್ದಿಲ್ಲದೆ ಖಾಸಗಿ ವ್ಯಕ್ತಿಗಳಿಗೆ ಲೀಜ್ ನೀಡುವ ಮೂಲಕ ಸರ್ಕಾರಿ ಆಸ್ತಿ ನುಂಗುವ ಪ್ಲಾನ್ ಅಂತ ಗದಗ-ಬೆಟಗೇರಿ ಅವಳಿ ನಗರದ ಜನರು ಮಾತಾಡ್ತಾಯಿದ್ದಾರೆ. ಬಿಜೆಪಿ ಭದ್ರಕೋಟೆಯಲ್ಲೇ ಅವಳಿ ನಗರದ ಜನ್ರು ಬಿಜೆಪಿಗೆ ಛೀ.., ಥೂ ಅಂತಿದ್ದಾರೆ. ಬಿಜೆಪಿ ನಗರಸಭೆ ಆಡಳಿತದ ಅಂದಿನ ಅಧ್ಯಕ್ಷೆ ಉಷಾ ದಾಸರ, ಸದಸ್ಯರಾದ ಅನಿಲ್ ಅಬ್ಬಿಗೇರಿ, ಗೂಳಪ್ಪ ಮೂಷಿಗೇರಿ ಅಂಡ್ ಗ್ಯಾಂಗ್ ನಗರಸಭೆ ಅಧಿಕೃತ ಠರಾವು ಬುಕ್ ನಲ್ಲಿ ಇಲ್ಲದಿದ್ರೂ ನಕಲಿ ಠರಾವು ಮಾಡಿ ಸಿಕ್ಕಾಕಿಕೊಂಡಿದ್ದಾರೆ.

ಫೆಬ್ರವರಿ, 9 ರಂದು ನಡೆದ ಸಾಮಾನ್ಯ ಸಭೆಯಲ್ಲಿ ಠರಾವು ನಂಬರ್ 378ರಲ್ಲಿ ನಗರಸಭೆ ಆಸ್ತಿ ಖಾಸಗಿ ವ್ಯಕ್ತಿಗಳಿಗೆ ಲೀಜ್ ನೀಡಲು ನಕಲಿ ಠರಾವು ಮಾಡಿದ್ದಾರೆ. ಆ ನಕಲಿ ಠರಾವುಗೆ ನಗರಸಭೆ ಪೌರಾಯುಕ್ತರ ಫೋರ್ಜರಿ ಸಹಿ ಮಾಡಿದ್ದಾರಂತೆ. ಈ ಎಲ್ಲ ನಕಲಿ ದಾಖಲೆ ಸೃಷ್ಟಿ ಮಾಡಿ ನಗರಸಭೆಯ ಬಿಜೆಪಿ ಆಡಳಿತ, ಖಾಸಗಿ ವ್ಯಕ್ತಿಯಾದ ವಿಜಯಲಕ್ಷ್ಮೀ ಶಿಗ್ಲಿಮಠ ಹಾಗೂ ಸೆಕ್ರೆಟರಿ ದಿ. ಕಾಟನ್ ಮಾರ್ಕೆಟ್



ವರ್ಕ್ ಓನರ್ಸ್, ಅಸೋಸಿಯೇಷನ್ ಗದಗ ಸಂಸ್ಥೆಗೆ ನೀಡಿದೆ. ಈ ಇಬ್ಬರು ವ್ಯಕ್ತಿಗಳು ನಗರಸಭೆ ನೀಡಿದ ದಾಖಲೆಗಳು ಹೈಕೋರ್ಟ್ ಗೆ ನೀಡಿದ್ದಾರೆ

ನಕಲಿ ಠರಾವು, ಪೌರಾಯುಕ್ತರ ಫೋರ್ಜರಿ ಸಹಿ ಮಾಡಿ ಬಿಜೆಪಿ ಆಡಳಿತ ನೂರಾರು ಕೋಟಿ ಆಸ್ತಿ ಖಾಸಗಿ ವ್ಯಕ್ತಿಗಳಿಗೆ ಲೀಜ್ ನೀಡಿ ಕೋಟ್ಯಾಂತರ ಲೂಟಿ ಮಾಡಿದೆ. ಈ ವಿಷಯ ಗೊತ್ತಾದ ಬಳಿಕ ಅಂದಿನ ಪ್ರಭಾರ ಪೌರಾಯುಕ್ತ ಪ್ರಶಾಂತ್ ವರಗಪ್ಪನವರ ಅಧ್ಯಕ್ಷೆ ಉಷಾ ದಾಸರ, ಸದಸ್ಯರಾದ ಅನಿಲ್ ಅಬ್ಬಿಗೇರಿ, ಗೂಳಪ್ಪ ಮುಷಿಗೇರಿ ಹಾಗೂ ವಿಜಯಲಕ್ಷ್ಮೀ ಶಿಗ್ಲಿಮಠ ಹಾಗೂ ಸೆಕ್ರೆಟರಿ ದಿ. ಕಾಟನ್ ಮಾರ್ಕೆಟ್ ವರ್ಕ್ ಓನರ್ಸ್, ಅಸೋಸಿಯೇಷನ್ ಗದಗ ಸಂಸ್ಥೆಯ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಿದ್ದಾರೆ. ಈ ವಿಷಯ ಅವಳಿ ನಗರದಲ್ಲಿ ಭಾರಿ ಸಂಚಲನ ಮೂಡಿಸಿದೆ.

**ಬಂಧನ ಭೀತಿ: ಅಧ್ಯಕ್ಷೆ ಸೇರಿ ಎಲ್ಲರೂ ಎಸ್ಕೇಪ್:** ಕ್ರಿಮಿನಲ್ ಕೇಸ್ ದಾಖಲಾಗಿರುವುದರಿಂದ ವಿಜಯಲಕ್ಷ್ಮೀ ಶಿಗ್ಲಿಮಠ ಹಾಗೂ ಸೆಕ್ರೆಟರಿ ದಿ. ಕಾಟನ್ ಮಾರ್ಕೆಟ್ ವರ್ಕ್ ಓನರ್ಸ್, ಅಸೋಸಿಯೇಷನ್ ಗದಗ ಸಂಸ್ಥೆ ಸದಸ್ಯರು ಹಾಗೂ ಮಾಜಿ ಅಧ್ಯಕ್ಷೆ ಉಷಾ ದಾಸರ, ಸದಸ್ಯರಾದ ಅನಿಲ್ ಅಬ್ಬಿಗೇರಿ, ಗೂಳಪ್ಪ ಮುಷಿಗೇರಿ ಬಂಧನದ ಭೀತಿಯಿಂದ ಗದಗ ಜಿಲ್ಲೆಯಿಂದ ಎಸ್ಕೇಪ್ ಆಗಿದ್ದಾರೆ. ಬೇಲ್ ಪಡೆಯಲು ಪ್ರಯತ್ನ ನಡೆಸಿದ್ದಾರೆ. ಬೇಲ್ ಸಿಕ್ಕ ನಂತರವೇ ಗದಗ ನಗರಕ್ಕೆ ಆಗಮಿಸಲಿದ್ದಾರೆ ಎನ್ನಲಾಗಿದೆ.

**ಪೊಲೀಸ್ ಅಧಿಕಾರಿಗಳ ಸಂಪರ್ಕಕ್ಕೂ ಸಿಗ್ತಿಲ್ಲ:** ಗದಗ ಬಡಾವಣೆ ಪೊಲೀಸ್ ಠಾಣೆಯಲ್ಲಿ ಕ್ರಿಮಿನಲ್ ಕೇಸ್ ದಾಖಲಾಗುತ್ತಿದ್ದಂತೆ ಅವಳಿ ನಗರದಿಂದ ಈ ಎಲ್ಲ ಆರೋಪಿಗಳು ಎಸ್ಕೇಪ್ ಆಗಿದ್ದಾರೆ ಎನ್ನಲಾಗಿದೆ. ಅವಳಿ ನಗರದಲ್ಲಿ ಸರ್ಕಾರ ಆಸ್ತಿ ಲೀಜ್ ವಿಚಾರ ಭಾರಿ ಚರ್ಚೆ ಆಗುತ್ತಿದ್ದಂತೆ ಪೊಲೀಸ್ ಇಲಾಖೆ ಅಲರ್ಟ್ ಆಗಿದೆ. ಹೀಗಾಗಿ ಶನಿವಾರ ಹಾಗೂ ರವಿವಾರ ನಗರಸಭೆ ಕಚೇರಿಗೆ ಬೆಟಗೇರಿ ಸಿಪಿಐ ಧೀರಜ್ ಶಿಂಧೆ ಹಾಗೂ ತಂಡ ಭೇಟಿ ನೀಡಿ ಸಂಬಂಧಪಟ್ಟ ಅಧಿಕಾರಿಗಳ, ಸಿಬ್ಬಂದಿಗಳ ತೀವ್ರ ವಿಚಾರಣೆ ಮಾಡಿ ವಿವಿರವಾದ ಮಾಹಿತಿ ಪಡೆದಿದ್ದಾರೆ. ಅಷ್ಟೇ ಅಲ್ಲ ಮಹತ್ವದ ದಾಖಲೆಗಳು ಕಲೆ ಹಾಕಿದ್ದಾರೆ. ನ್ಯಾಯಾಲಯದಲ್ಲಿನ ದಾಖಲೆಗಳು ಕೂಡ ಕಲೆ ಹಾಕಲಾಗುತ್ತಿದೆ. ಆದ್ರೆ, ಪ್ರಮುಖ ಆರೋಪಿಗಳಿಗೆ ತನಿಖೆಗೆ ಹಾಜರಾಗುವಂತೆ ನೋಟಿಸ್ ನೀಡಲು ಮನೆಗೆ ಹೋದ್ರೆ ಸಿಕ್ಕಿಲ್ಲ ಅಂತ ಪೊಲೀಸ್ ಅಧಿಕಾರಿಗಳು ಟಿವಿ9ಗೆ ತಿಳಿಸಿದ್ದಾರೆ. ಪೊಲೀಸರು ಆರೋಪಿಗಳ ಹುಡುಕಾಟ ನಡೆಸಿದ್ದಾರೆ. ನೋಟಿಸ್ ಮುಟ್ಟಿಸುವ ಪ್ರಯತ್ನ ಮಾಡಲಾಗುತ್ತೆ. ಒಂದು ವೇಳೆ ಸಿಗದಿದ್ರೆ ಕಾನೂನು ಅಡಿಯಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುತ್ತೆ ಅಂತ ಎಸ್ಪಿ ಬಿ ಎಸ್ ನೇಮಿಗೌಡ ಮಾಹಿತಿ ನೀಡಿದ್ದಾರೆ.

**ಯಾವುದೇ ಕ್ಷಣದಲ್ಲೂ ಬಂಧನ ಸಾಧ್ಯತೆ:** ನಕಲಿ ಠರಾವು ಪ್ರತಿ ಕೊಟ್ಟವರು ಯಾರು ಪೌರಾಯುಕ್ತರ ಸಹಿ ಮಾಡಿದವರು ಯಾರು ಅನ್ನೋ ಬಗ್ಗೆ ಕೋರ್ಟ್ ಗೆ ದಾಖಲೆ ನೀಡಿದ ಪುಟ 2

## ಬೀಗರೂಟ ಸೇವಿಸಿದ್ದ 2 ಮಂದಿಗೆ ವಾಂತಿ

# ಜನರು ಅಸ್ವಸ್ಥ

**ತುಮಕೂರು:** ಬೀಗರೂಟ ಸೇವಿಸಿದ್ದ 24 ಜನರು ವಾಂತಿ, ಭೇದಿಯಿಂದ ಅಸ್ವಸ್ಥಗೊಂಡಿರುವ ಘಟನೆ ತುಮಕೂರು ಜಿಲ್ಲೆ ಪಾವಗಡ ತಾಲೂಕಿನ ಶ್ರೀರಂಗಪುರ ತಾಂಡಾದಲ್ಲಿ ನಡೆದಿದೆ. ಕಳ್ಳಬಟ್ಟಿ ಸೇವಿಸಿ ಈ ರೀತಿ ಆಗಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ಸದ್ಯ ಅಸ್ವಸ್ಥಗೊಂಡವರು ಸ್ಥಳೀಯ ಆಸ್ಪತ್ರೆ ಹಾಗೂ ಬೆಂಗಳೂರು, ಪಾವಗಡ, ಹಿಂದೂಪುರದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಆಗಸ್ಟ್ 14 ಮತ್ತು 15ರಂದು ಪಾವಗಡ ತಾಲೂಕಿನ ನಾಗೇನಹಳ್ಳಿ ತಾಂಡಾದಲ್ಲಿ ಮದುವೆ ನಡೆದಿತ್ತು. ಮರು ದಿನ ಆಗಸ್ಟ್ 16ರಂದು ಶ್ರೀರಂಗಪುರ ತಾಂಡಾದಲ್ಲಿ ಬೀಗರ ಊಟ ಆಯೋಜಿಸಲಾಗಿತ್ತು. ಊಟ ಮಾಡಿ ವಾಪಸ್ ತೆರಳಿದ ನಾಗೇನಹಳ್ಳಿ ತಾಂಡಾದ ಜನರ ಆರೋಗ್ಯದಲ್ಲಿ ಏರುಪೇರು ಕಂಡು ಬಂದಿದೆ. 24 ಮಂದಿಗೆ ಕಾರ್ಯಕ್ರಮ ನಡೆದ ದಿನದಿಂದ ವಾಂತಿ, ಭೇದಿಯಾಗಿ ಅಸ್ವಸ್ಥರಾಗಿದ್ದಾರೆ. ಕಳ್ಳಬಟ್ಟಿ



ಸೇವನೆಯಿಂದಲೇ ಹೀಗಾಗಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ.

ಅಸ್ವಸ್ಥಗೊಂಡವರು ಹೊಟ್ಟೆ ನೋವು, ಭೇದಿಯಾಗಿ ಶುಕ್ರವಾರ ರಾತ್ರಿ ಆಸ್ಪತ್ರೆ ಸೇರಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಬೆಂಗಳೂರು, ಪಾವಗಡ, ಹಿಂದೂಪುರದಲ್ಲಿ ತಲಾ ಒಬ್ಬರಂತೆ ಮೂವರು ಚಿಕಿತ್ಸೆ ಪಡೆಯುತ್ತಿದ್ದಾರೆ.

ನಾಗೇನಹಳ್ಳಿ ತಾಂಡಾಗೆ ಉಪವಿಭಾಗಧಿಕಾರಿ ತಹಶೀಲ್ದಾರ್, ಪುಟ 2

### ಜಿಲ್ಲಾ ಅರ್ಯ ಈಡಿಗ ಜನಾಂಗದ ಕೌಶಲ್ಯ ಅಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷ ಮಾಸ್ತಿ ಟಿ.ಸಿ ರಮೇಶ್ ಒತ್ತಾಯ

# ಉದ್ಯಾನವನಕ್ಕೆ ಬ್ರಹ್ಮಶ್ರೀ ನಾರಾಯಣ ಗುರು ಹೆಸರಿಡಿ

**ಕೋಲಾರ:** ತಳ ಸಮುದಾಯದ ಏಳಿಗೆಗಾಗಿ ದುಡಿದ ಬ್ರಹ್ಮ ಶ್ರೀ ನಾರಾಯಣ ಗುರುಗಳ ನೆನಪು ತರುವಂತೆ ಜಿಲ್ಲೆಯ ಒಂದು ಉದ್ಯಾನವನಕ್ಕೆ ಆಗಲಿ,ಒಂದು ರಸ್ತೆಗಾಗಲಿ, ವೃತ್ತಕ್ಕಾಗಲಿ ಅವರ ಹೆಸರು ಇಡುವಂತೆ ಕೋಲಾರ ಜಿಲ್ಲಾ ಅರ್ಯ ಈಡಿಗ ಜನಾಂಗದ ಕೌಶಲ್ಯ ಅಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷ ಮಾಸ್ತಿ ಟಿ.ಸಿ ರಮೇಶ್ ಸರ್ಕಾರವನ್ನು ಒತ್ತಾಯಿಸಿದರು.



ಕೋಲಾರ ನಗರದ ಸುವರ್ಣ ಕನ್ನಡ ಭವನದಲ್ಲಿ ಮಂಗಳವಾರ ಕನ್ನಡ ಸಂಸ್ಕೃತಿ ಇಲಾಖೆ, ಜಿಲ್ಲಾಡಳಿತ ಇವರ ಸಹಯೋಗದಲ್ಲಿ ಕೋಲಾರ ಜಿಲ್ಲಾ ಆರ್ಯ ಈಡಿಗ ಜನಾಂಗದ ಕೌಶಲ್ಯಾಭಿವೃದ್ಧಿ ಸಂಘದ ಸಹಭಾಗಿತ್ವದಲ್ಲಿ ಆಯೋಜಿಸಿದ್ದ ಬ್ರಹ್ಮರ್ಷಿ ನಾರಾಯಣ ಗುರುಗಳ 170 ನೇ ಜಯಂತಿ ಆಚರಣೆ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ ಕೇರಳದಲ್ಲಿ ನಡೆಯುತ್ತಿದ್ದ ಅಸ್ಪೃಷ್ಯತೆಯನ್ನು ನಿವಾರಿಸಲು ಸದಾ ಮಿಡಿಯುತ್ತಿದ್ದ ನಾರಾಯಣ ಗುರುಗಳು ಎಲ್ಲಾ ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಶ್ರಮಿಸಿದ ಚೇತನ. ಅವರ ತತ್ವ ಒಂದೇ ಕುಲ ಒಂದೇ ಮತ ಒಂದೇ ದೇವರು ಎಂಬುದನ್ನು ನಾವು ಅನುಸರಿಸಿದರೆ ಅದ್ಬುತವಾಗಿ ಬದುಕಬಹುದು ಎಂದು ನುಡಿದರು.

ಕೋಲಾರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ. ಕೊತ್ತೂರು ಮಂಜುನಾಥ್ ಮತ್ತು ವಿಧಾನ ಪರಿಷತ್ ಸದಸ್ಯರಾದ ಎಂ.ಎಲ್. ಅನಿಲ್ ಕುಮಾರ್ ಸಮಾರಂಭದಲ್ಲಿ ಭಾಗವಹಿಸಿ ನಾರಾಯಣ ಗುರುಗಳಿಗೆ ಪುಷ್ಪ ನಮನ ಸಲ್ಲಿಸಿದರು. ಜೊತೆಗೆ ಅಧ್ಯಕ್ಷರು ನೀಡಿದ ಮನವಿಯಂತೆ ಸ್ಪಂದಿಸಿದ ಶಾಸಕರು

ನಾರಾಯಣ ಗುರುಗಳ ಹೆಸರನ್ನು ಯಾವುದಾದರೂ ಒಂದು ರಸ್ತೆ ಅಥವಾ ಉದ್ಯಾನವನಕ್ಕೆ ಇಡುವ ಮತ್ತು ಸಂಘಕ್ಕೆ ನಿವೇಶನ ನೀಡುವ ಬಗ್ಗೆ ಭರವಸೆ ನೀಡಿದರು.

ಉಪನ್ಯಾಸ ನೀಡಿದ ಡಾ. ಮಮತೇಶ್ ರವರು ಮಾತನಾಡಿ ನಾರಾಯಣ ಗುರುಗಳ ಬಾಲ್ಯ ಅವರ ಜೀವನ ಅವರ ಹೋರಾಟ ಬದುಕಿನ ಬಗ್ಗೆ ಪೂರ್ಣ ವಿವರವನ್ನು ನೀಡಿದರು. ತಹಸೀಲ್ದಾರರಾದ ಸಿರಿನ್ ತಾಜ್ ರವರು ಮಾತನಾಡುತ್ತಾ ನಾರಾಯಣ ಗುರುಗಳು ಹಾಕಿಕೊಟ್ಟ ಮಾರ್ಗದಲ್ಲಿ ನಾವು ನಡೆಯಬೇಕಿದೆ. ಆ ನಿಟ್ಟಿನಲ್ಲಿ ನಡೆದಾಗ ಮಾತ್ರ ನಮ್ಮ ಬದುಕು ಸುಂದರವಾಗಿರಲು ಸಾಧ್ಯ ಎಂದರು.

ಖ್ಯಾತ ಜನಪದ ಗಾಯಕ ಕೋಲಾರ ರಾಜಪ್ಪ ಮಾತನಾಡುತ್ತಾ ಯಾವುದೇ ಜಯಂತಿಗಳ ಆಚರಣೆಗಳು ಒಂದು ಜಾತಿಗೆ ಮಾತ್ರ ಸೀಮಿತವಾಗಬಾರದು ಜಾತಿ ಪದ್ಧತಿಯನ್ನು ಎತ್ತಿ ಹಿಡಿಯುವಂತಿರಬಾರದು ಎಂದರು.

ಈಡಿಗ ಸಮುದಾಯದ ಸುಮಾರು 25 ಕ್ಕೂ ಹೆಚ್ಚು ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ನಗದು ಬಹುಮಾನ ನೀಡಿ ಗೌರವಿಸಲಾಯಿತು ಹಾಗೂ ಸಮಾಜಕ್ಕೆ ದುಡಿದ ಅನೇಕ ಗಣ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಮಾಲೂರು ವಿಜಿಯರವರ ರಂಗ ವಿಜಯಾ ಟ್ರಸ್ಟ್ ನ ಸಹಯೋಗದಲ್ಲಿ ಗುರು ಡಾ. ಮಾಲಿನಿ ರವಿಶಂಕರ್ ರವರ ನೇತೃತ್ವದಲ್ಲಿ ನಾರಾಯಣ ಗುರುಗಳ ನೃತ್ಯ ರೂಪಕ ಅದ್ಭುತವಾಗಿ ಮೂಡಿ ಬಂತು.

ಸಮಾರಂಭದಲ್ಲಿ ಈಡಿಗ ಸಮುದಾಯದ ಕಾರ್ಯಕಾರಿ ಸಮಿತಿ ಸದಸ್ಯ ವಿ.ನಾರಾಯಣಪ್ಪ ,ಕಾರ್ಯದರ್ಶಿ ನಾರಾಯಣಸ್ವಾಮಿ ಖಜಾಂಚಿ ಬಿ. ಮುನಿರಾಜು, ಮುಖಂಡರುಗಳಾದ ಸೀತಾರಾಮ್ ರಾಜೇಂದ್ರ,ಕೊಲದೇವಿ ಗಂಗಾಧರ್, ಆದಿನಾರಾಯಣ ಎಸ್. ಎನ್. ಡಿ. ಪಿ. ವಿಧ್ಯಾನಂದನ್, ಶಿವದಾಸ್, ಗೌನಪಲ್ಲಿ ಶ್ರೀನಿವಾಸ್, ಮುದಿ ಮಡುಗು ನಾಗಭೂಷಣ್, ರೋಣೂರು ಗೋಪಿನಾಥ್, ಮಲ್ಲಿಕಾರ್ಜುನ್ ರಾಮನಗರದ ಗುರುಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

## ಸೊಳ್ಳೆಗಳಿಂದ ಹರಡುವ ರೋಗ ನಿಯಂತ್ರಣವೇ ನಮ್ಮ ಗುರಿ



**ಮಂಡ್ಯ:** ಸೊಳ್ಳೆಗಳ ಕಡಿತದಿಂದ ಹರಡುವ ರೋಗಗಳಾದ ಮಲೇರಿಯಾ, ಡೆಂಗ್ಯೂ, ಚಿಕೂನ್ ಗುನ್ಯಾ, ಝಿಕಾ ಸೋಂಕು ನಿಯಂತ್ರಣವು ನಮ್ಮೆಲ್ಲರ ಗುರಿಯಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ಕೆ.ಮೋಹನ್ ತಿಳಿಸಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ತರಬೇತಿ ಕೇಂದ್ರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ, ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿ, ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ, ತಾಲ್ಲೂಕು ಆರೋಗ್ಯಾಧಿಕಾರಿ ಕಚೇರಿ ಸಹಯೋಗದಲ್ಲಿ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ಪ್ರಯುಕ್ತ ಸರ್ಕಾರಿ/ಖಾಸಗಿ ಪ್ರೌಢಶಾಲೆ ವಿಜ್ಞಾನ ಶಿಕ್ಷಕರಿಗೆ ಡೆಂಗ್ಯೂ ನಿಯಂತ್ರಣ ಕುರಿತು ಅಡ್ವೋಕೆಸಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಮನೆಯ ಸುತ್ತಮುತ್ತಲಿನ ಸ್ಥಳಗಳ ನೈರ್ಮಲ್ಯದ ಅಗತ್ಯದ ಬಗ್ಗೆ ತಿಳಿಸುವ ಆಗಸ್ಟ್ 20 ಅನ್ನು ಸೊಳ್ಳೆಗಳ ದಿನವನ್ನಾಗಿ ಆಚರಿಸುತ್ತಿದ್ದೇವೆ, ರಕ್ತವೇ ಸೊಳ್ಳೆಗಳಿಗೆ ಆಹಾರವಾಗಿದೆ, ಶಾಲಾ ಕಾಲೇಜುಗಳ ಆವರಣ ಸೇರಿದಂತೆ ಅಲ್ಲಿನ ಸುತ್ತಮುತ್ತಲ ಪ್ರದೇಶವನ್ನು ಸ್ವಚ್ಛವಾಗಿಟ್ಟುಕೊಂಡು ಅಲ್ಲಿ ನೀರು ನಿಲ್ಲಿದಂತೆ ಎಚ್ಚರಿಕೆ ವಹಿಸಬೇಕು. ಇದರಿಂದ ಸೊಳ್ಳೆಗಳ ಸಂತಾನೋತ್ಪತ್ತಿ ಕಡಿಮೆಯಾಗಿ ಕ್ರಮೇಣ ಸೊಳ್ಳೆ ನಿಯಂತ್ರಣಕ್ಕೆ ಸಹಕಾರಿಯಾಗಿದೆ ಎಂದು ಸಲಹೆ ನೀಡಿದರು. ಜಿಲ್ಲಾ ಕೀಟ ಶಾಸ್ತ್ರಜ್ಞರಾದ ಜಾನೆಟ್ ಮಾತನಾಡಿದರು. ಹೆಣ್ಣು ಅನಾಫೆಲಿಸ್ ಸೊಳ್ಳೆಗಳಿಂದ ಒಬ್ಬರಿಂದ ಒಬ್ಬರಿಗೆ ಮಲೇರಿಯಾ ಹರಡುತ್ತದೆ. ಸೊಳ್ಳೆಗಳಿಂದ ದೇಶದಲ್ಲಿ ಒಂದು ವರ್ಷದಲ್ಲಿ 7 ಲಕ್ಷಗಳಿಗೂ ಹೆಚ್ಚು ಜನರು ಸಾಯುತ್ತಾರೆ, ಪ್ರಾಣಿಗಳಿಗೆ ಹೆದರುವ ಹಾಗಿಲ್ಲ, ಇಲ್ಲಿ ಸೊಳ್ಳೆಗಳಿಗೆ ಹೆದರುವ ಅವಶ್ಯಕತೆ ಇದೆ ಎಂದು ಆತಂಕ ಪಟ್ಟರು. ಕಾರ್ಯಕ್ರಮದಲ್ಲಿ ಟಿ.ಎಚ್.ಓ ಜವರೇಗೌಡ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಕಾಂತರಾಜು, ಆರೋಗ್ಯ ನಿರೀಕ್ಷಣಾಧಿಕಾರಿ ಸೋಮಶೇಖರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಕುಮಾರ್, ಡಾ.ಮಮತಾ ಭಾಗವಹಿಸಿದ್ದರು.



**ವಿಜಯಪುರದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಅಖಿಲ ಕರ್ನಾಟಕ ಮಿತ್ರ ಸಂಘದ ವತಿಯಿಂದ ಮಂಗಳವಾರದಂದು ನುಲಿಯ ಚಂದಯ್ಯ ನವರ ಜಯಂತಿ ಪ್ರಯುಕ್ತ ನುಲಿಯ ಚಂದಯ್ಯ ನವರ ಬಗ್ಗೆ ಬೆಂಗಳೂರು ಗ್ರಾಮಾಂತರ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಚಂದ್ರಶೇಖರ್ ಆಡಪ್ಪದ್ ಉಪನ್ಯಾಸ ನೀಡಿದರು. ಸಂಘದ ಅಧ್ಯಕ್ಷ ಚಿ ಮಾ ಸುಧಾಕರ್ ಇದ್ದರು.**

### ಶಾಸಕ ಸಿ. ಪುಟ್ಟರಂಗಶೆಟ್ಟಿ ಬಣ್ಣನೆ

# ಸಮಾಜ ಸುಧಾರಣೆಗೆ ಅರಸು ಕೊಡುಗೆ

**ಚಾಮರಾಜನಗರ:** ಡಿ. ದೇವರಾಜು ಅರಸು ಅವರು ಹಲವಾರು ಜನಪರ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಸಾಮಾಜಿಕ ಸುಧಾರಣೆಯಲ್ಲಿ ಕ್ರಾಂತಿಕಾರಕ ಬದಲಾವಣೆ ತಂದಿದ್ದಾರೆ ಎಂದು ಮಾಜಿ ಜಿಲ್ಲಾ ಉಸ್ತುವಾರಿ ಸಚಿವ, ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಹಾಲಿ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಅಭಿಪ್ರಾಯಪಟ್ಟರು.



ಚಾಮರಾಜನಗರದ ವರನಟ ಡಾ.ರಾಜ್ಕುಮಾರ್ ಜಿಲ್ಲಾ ರಂಗಮಂದಿರದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಾಮಾಜಿಕ ಕ್ರಾಂತಿಯ ಹರಿಕಾರ, ಹಿಂದುಳಿದ ವರ್ಗಗಳ ನೇತಾರ, ಧೀನದಲಿತರ ಧೀಮಂತ ನಾಯಕ ಹಾಗೂ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಡಿ. ದೇವರಾಜ ಅರಸು ಅವರ 109ನೇ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸ್ವಾತಂತ್ರ್ಯ ಪೂರ್ವದಲ್ಲಿಯೇ ಸಾಕಷ್ಟು ಜನಪರ ಹೋರಾಟಗಳಲ್ಲಿ ಭಾಗವಹಿಸಿದ್ದ ದೇವರಾಜ ಅರಸು ಅವರು ಪ್ರಜಾಪ್ರಭುತ್ವದ ಆಶಯದಂತೆ ಮೀಸಲಾತಿಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ಬಡವರ, ಶೋಷಿತರ, ಹಿಂದುಳಿದ ವರ್ಗಗಳ, ದೀನದಲಿತರಿಗೆ ಸಾಮಾಜಿಕ ನ್ಯಾಯ ದೊರಕಿಸಲು ಮುನ್ನುಡಿ ಬರೆದರು. 20 ಅಂಶಗಳ ಕಾರ್ಯಕ್ರಮಗಳನ್ನು ಜಾರಿಗೆ ತಂದು ಎಲ್ಲಾ ಸಮುದಾಯಗಳಿಗೂ ಶಿಕ್ಷಣ, ಉದ್ಯೋಗ ಕಲ್ಪಿಸಿದರು. ಭೂ ಸುಧಾರಣೆ, ಜೀತಪದ್ದತಿ ನಿಷೇಧ, ಆಶ್ರಯ ಯೋಜನೆ ಮನೆಗಳು ಅರಸು ಅವರ ಪ್ರಮುಖ ಕೊಡುಗೆಗಳಾಗಿವೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ ಅವರು ಮಾತನಾಡಿ ಭಾರತ ಕಂಡ ಅಪ್ರತಿಮ ರಾಜಕಾರಣಿ, ರಾಜಕೀಯ ಮುತ್ಸದ್ದಿ ದೇವರಾಜ ಅರಸು ಆಗಿದ್ದಾರೆ. ಕೃಷಿಕ ಕುಟುಂಬದಿಂದ ಬಂದ ಅರಸು ಅವರು ರೈತಾಪಿ ವರ್ಗಗಳ ಕಷ್ಟ-ಕಾರ್ಪಣ್ಯಗಳನ್ನು ಹತ್ತಿರದಿಂದ ಅರಿತಿದ್ದರು. ಸಮಾಜದಲ್ಲಿ ಬಡವರ, ಶೋಷಿತರ ಧನಿಯಾಗಿದ್ದ ಅರಸು ಅವರು ಇಡೀ ದೇಶಕ್ಕೆ ಮಾದರಿ ರಾಜಕಾರಣಿ ಎಂದರೆ ತಪ್ಪಾಗಲಾರದು. ಅವರು ಸದಾ ಸ್ಮರಣೀಯರಾಗಿದ್ದಾರೆ ಎಂದು ತಿಳಿಸಿದರು.

ಮೈಸೂರು ವಿಶ್ವವಿದ್ಯಾಲಯದ ಸಂದರ್ಶಕ ಪ್ರಾಧ್ಯಾಪಕರು ಹಾಗೂ ಲೇಖಕರಾದ ಪ್ರೊ. ಸಿ. ನಾಗಣ್ಣ ಅವರು ಮುಖ್ಯ ಭಾಷಣ ಮಾಡಿ ಆಧುನಿಕ ಭಾರತದ ಚರಿತ್ರೆಯಲ್ಲಿ ಅರಸು ಅವರ ಸಮಾಜ ಸುಧಾರಣೆ, ರಾಜಕೀಯ ಜೀವನ, ಆಡಳಿತ ಸುವರ್ಣಾಕ್ಷರಗಳಲ್ಲಿ ಬರೆದಿಡುವಂತಹ ಸಾಧನೆಯಾಗಿದೆ. ಅರಸು ಅವರ ಜನಪರ ಯೋಜನೆಗಳ ಜಾರಿ ನವಕರ್ನಾಟಕದ ಉದಯಕ್ಕೆ ಕಾರಣವಾಯಿತು. ಯಾವುದೇ ಪ್ರಭಾವವಿಲ್ಲದೆ ಸ್ವಸಾಮರ್ಥ್ಯದಿಂದ ಮೇಲೆ ಬಂದ ಅರಸು ಅವರು ನೇರ ಹಾಗೂ ನಿಷ್ಠುರವಾದಿಯಾಗಿದ್ದರು. ಕುವೆಂಪು ಅವರ ಅಭಿಯಾನಿಯಾಗಿದ್ದ ಅರಸು ಅವರು ಸಂಗೀತ, ಸಾಹಿತ್ಯ ಹಾಗೂ ಲಲಿತಕಲೆಗಳ ಆರಾಧಕರು ಆಗಿದ್ದರು ಎಂದರು.

ಸಾಮಾಜಿಕ ಅಸಮಾನತೆ ತೊಡೆಯಲು ಎಲ್.ಜಿ. ಹಾವನೂರು ಆಯೋಗ ರಚಿಸಿ ಹಿಂದುಳಿದವರ ಏಳಿಗೆಗೆ ಶ್ರಮಿಸಿದ ಅರಸು ಅವರು ಭೂ ಸುಧಾರಣೆ ಕಾಯ್ದೆ, ಜೀತಪದ್ಧತಿ ನಿರ್ಮೂಲನೆ, ಋಣಮುಕ್ತ ಕಾಯ್ದೆಗಳನ್ನು ಜಾರಿಗೊಳಿಸಿದರು. ಮೈಸೂರು ರಾಜ್ಯಕ್ಕೆ ಕರ್ನಾಟಕವೆಂದು ಮರುನಾಮಕರಣ ಮಾಡಿದರು. 1975-76ರಲ್ಲಿ 50 ಸಾವಿರ ನಿರುದ್ಯೋಗಿಗಳಿಗೆ ಶಿಷ್ಯವೇತನ ಒದಗಿಸಿ ಆರ್ಥಿಕ ಸಬಲೀಕರಣಕ್ಕೆ ನೆರವಾದರು. ಅರಸು ಅವರ ಕಾಲದಲ್ಲಿ ದಲಿತ ಹಾಗೂ ಬಂಡಾಯ ಸಾಹಿತ್ಯಗಳು ಹೊರಹೊಮ್ಮಿದವು ಎಂದು ಸಿ. ನಾಗಣ್ಣ ಅವರು ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಇದು ಮಹಾಪುರುಷರನ್ನು ಸ್ಮರಿಸುವ ವಿಶೇಷ ಕಾರ್ಯಕ್ರಮವಾಗಿದೆ. ಬಡವರು, ಹಿಂದುಳಿದವರ ನೇತಾರರಾಗಿದ್ದ ಅರಸು ಅವರು ತಮ್ಮ ರಾಜಕೀಯ ಬದುಕಿನುದ್ದಕ್ಕೂ ರಾಜ್ಯದ ಶೈಕ್ಷಣಿಕ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದರು. ಶಿಕ್ಷಣ ಸುಧಾರಣೆಗೆ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳನ್ನು ಆರಂಭಿಸಿದರು. ಅರಸು ಅವರನ್ನು ಚಿರಸ್ಥಾಯಿಯಾಗಿಸುವ ಉದ್ದೇಶದಿಂದ ಪ್ರತಿವರ್ಷ ದೇವರಾಜ ಅರಸು ಪ್ರಶಸ್ತಿ ನೀಡಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿವಾಹಕ ಅಧಿಕಾರಿ ಮೋನಾ ರೋತ್ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ ಅವರು ಡಿ ದೇವರಾಜ ಅರಸು ಅವರ ಜೀವನ ಸಾಧನೆ ಬಗ್ಗೆ ಮಾತನಾಡಿದರು.

ಇದೇ ವೇಳೆ ಕಳೆದ ಬಾರಿಯ ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಕಾರ್ಯಕ್ರಮದ ಸ್ಮರಣಿಕೆ ನೀಡಿ ಸನ್ಮಾನಿಸಲಾಯಿತು. ಜನಪದ ಗಾಯಕರಾದ ಸಿ.ಎಂ. ನರಸಿಂಹಮೂರ್ತಿ ಯವರು ಪ್ರಸ್ತುತಪಡಿಸಿದ ಡಿ. ದೇವರಾಜ ಅರಸು ಕುರಿತ ಗಾಯನ ಗಮನ ಸೆಳೆಯಿತು.

ಚಾಮರಾಜನಗರ-ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್, ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷರಾದ ಎಚ್.ವಿ. ಚಂದ್ರು, ಚಾಮುಲ್ ಅಧ್ಯಕ್ಷರಾದ ವೈ.ಸಿ. ನಾಗೇಂದ್ರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಕುಮಾರ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ವೇದಿಕೆ ಕಾರ್ಯಕ್ರಮಕ್ಕೂ ಮೊದಲು ನಗರದ ಶ್ರೀ ಚಾಮರಾಜೇಶ್ವರ ದೇವಾಲಯದಿಂದ ಜಿಲ್ಲಾಡಳಿತ ಭವನದವರೆಗೆ ವಿವಿಧ ಜಾನಪದ ಕಲಾತಂಡಗಳೊಂದಿಗೆ ಆಯೋಜಿಸಲಾಗಿದ್ದ ಡಿ. ದೇವರಾಜ ಅರಸು ಅವರ ಭಾವಚಿತ್ರ ಮೆರವಣಿಗೆಗೆ ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಚಾಲನೆ ನೀಡಿದರು.

## ಸೆ.13 ರಂದು ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳ

**ಬೆಂಗಳೂರು ಗ್ರಾಮಾಂತರ:** ಸೆಪ್ಟೆಂಬರ್ 13 ರಂದು ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳವನ್ನು ದೇವನಹಳ್ಳಿ ಟೌನ್ ನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಆಯೋಜಿಸಲಾಗಿದ್ದು, ಉದ್ಯೋಗಾಕಾಂಕ್ಷಿಗಳು ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿಸಿಕೊಳ್ಳಲು ಅಪರ ಜಿಲ್ಲಾಧಿಕಾರಿ ಅಮರೇಶ್.ಹೆಚ್ ಅವರು ಹೇಳಿದರು. ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ ಗ್ರಾಮದ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಯವರ ನ್ಯಾಯಾಲಯ ಸಭಾಂಗಣದಲ್ಲಿ ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳ ಕಾರ್ಯಕ್ರಮ'ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸೆಪ್ಟೆಂಬರ್ 13 ರಂದು ನಡೆಯಲಿರುವ ಬೃಹತ್ ಉದ್ಯೋಗ ಮೇಳದಲ್ಲಿ ಪ್ರತಿಷ್ಠಿತ ಕಂಪನಿಗಳು ಭಾಗಿಯಾಗಲಿದ್ದು, ಹಲವು ಹುದ್ದೆಗಳಿಗೆ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಉದ್ಯೋಗ ಮೇಳದಲ್ಲಿ ಭಾಗವಹಿಸಲು ಆನ್ಲೈನ್ ಪೋರ್ಟಲ್ https://bangalorerural.nic.in/en/job-fair/ ನಲ್ಲಿ ಸ್ವ-ವಿವರದೊಂದಿಗೆ ನೊಂದಾಯಿಸಬಹುದಾಗಿದೆ. ಉದ್ಯೋಗಾವಕಾಶ ಪಡೆದುಕೊಳ್ಳಲು ಉತ್ತಮ ವೇದಿಕೆಯಾಗಿದ್ದು, ಉದ್ಯೋಗ ಮೇಳಕ್ಕೆ ಅಭ್ಯರ್ಥಿಗಳು ನೋಂದಾಯಿಸಲು ಜಿಲ್ಲೆಯ ಎಲ್ಲಾ ಕಾಲೇಜುಗಳಿಗೆ ಮಾಹಿತಿ ನೀಡಿ, ಉದ್ಯೋಗ ಹುಡುಕುತ್ತಿರುವ ನಿರುದ್ಯೋಗ ಯುವಕ ಯುವತಿಯರಿಗೆ ಹೆಚ್ಚಿನ ಪ್ರಚಾರ ನೀಡಿ ನೋಂದಾಯಿಸಿಕೊಳ್ಳುವಂತೆ ಕ್ರಮ ವಹಿಸಿ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಸೂಚಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಾದ ಟಿ.ಕೆ ರಮೇಶ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆಯ ಕೌಶಲ್ಯಾಭಿವೃದ್ಧಿ ಅಧಿಕಾರಿ ಜಗನ್ನಾಥ, ಜಿಲ್ಲಾ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯ ಜಂಟಿ ನಿರ್ದೇಶಕ ನರೇಂದ್ರ, ಬಾಬು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ನಟ ವಿಶ್ವಪ್ರಕಾಶ ಮಲಗೊಂಡಗೆ ಬಸವ ಶ್ರೀರಕ್ಷೆ ನೀಡಿ ಗೌರವ ಸನ್ಮಾನ

**ವಿಜಯಪುರ :** ಪೂಜ್ಯ ಶ್ರೀ ಪ್ರಭುಲಿಂಗ ಶರಣರು ವಿಜಯಪುರದ ನಟ, ನಿರ್ದೇಶಕ, ನಿರ್ಮಾಪಕ, ಪತ್ರಕರ್ತ ವಿಶ್ವಪ್ರಕಾಶ ಟಿ ಮಲಗೊಂಡ ಅವರಿಗೆ ಬಸವ ಶ್ರೀರಕ್ಷೆ ನೀಡಿ ಸನ್ಮಾನಿಸಿ ಗೌರವಿಸಿ ಆಶೀರ್ವದಿಸಿದರು. ಸೋಮವಾರ ಸಿಂದಗಿ ತಾಲೂಕಿನ ಹಿಕ್ಕನಗುತ್ತಿ ಗ್ರಾಮದ ಲಿಂಗಾಯತ ಮಹಾಮಠದಲ್ಲಿ ನೂಲ ಹುಣ್ಣಿಮೆ ಶಿವಶರಣ ಹಡಪದ ಅಪ್ಪಣ್ಣನವರ ಜಯಂತಿ ಮತ್ತು ಶಿವಶರಣ ನೂಲಿಯ ಚಂದಯ್ಯನವರ ಜಯಂತಿ ಪ್ರಯುಕ್ತ ಮಾಸಿಕ 6 ಶಿವಾನುಭವ ಕಾರ್ಯಕ್ರಮದಲ್ಲಿ ಬಸವ ಶ್ರೀರಕ್ಷೆ ನೀಡಿ ಸನ್ಮಾನಿಸಿ ಗೌರವಿಸಿ ಆಶೀರ್ವದಿಸಿದರು. ಸಹ ಕಲಾವಿದ ಹಾಗೂ ಸಾರಿಗೆ ಇಲಾಖೆಯ ಕೆಎಸ್ ಟಿ ಕಾನ್ಸ್ಟೇಬಲ್ ಈರಣ್ಣ ಹಡಪದ ಅವರಿಗೆ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ತಾರಾಪೂರದ ಪೂಜ್ಯ ಶ್ರೀ ಮುರಳಿಧರ ಮುತ್ಯಾರು, ಚಿಕ್ಕರೂಗಿಯ ಶರಣ ಶ್ರೀ ಈರಣ್ಣ ಶಾಸ್ತ್ರೀಗಳು, ಮಲಕಣ್ಣ ಗೊ ತಳವಾರ, ಸಂಗಣ್ಣ ಬ್ಯಾಕೋಡ, ರಾಷ್ಟ್ರೀಯ ಬಸವಧಳ ಮಾಜಿ ಅಧ್ಯಕ್ಷ ಗುರುಪಾದ ತಾರಾಪೂರ, ರವಿರಾಜ ದೇವರಮನಿ, ಕಾನೂನ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ, ನ್ಯಾಯವಾದಿ ಡಿ ಎ ಚನಗೊಂಡ ಅಧ್ಯಕ್ಷತೆ ವಹಿಸಿದ್ದರು. ಗೋಲಗೇರಿ ಮಾಜಿ ಜಿಲ್ಲಾ ಪಂಚಾಯತಿ ಸದಸ್ಯ ಮುರುಗೆಪ್ಪಗೌಡ್ರು ಸಿ ರುದ್ದೇವಾಡಗಿ, ಜಗದೀಶ ಕಲಬುರಗಿ, ಬಿಜೆಪಿ ಮುಖಂಡ ಮುತ್ತು ಶಾಬಾದಿ ಬ್ಯಾಕೋಡ, ಸಿಂದಗಿ ಹ.ಅ.ಸ.ಸೇ.ಸಂಸ್ಥೆ ಅಧ್ಯಕ್ಷ ಮಹಾಂತೇಶ ಕೆ ಮೂಲಿಮನಿ, ಮಿರಗಿ ಬಸವ ಕೇಂದ್ರ ಅಧ್ಯಕ್ಷ ಡಾ.ದೇವೆಂದ್ರ ಸೋ ಬರಡೋಲ, ಸಿಂದಗಿಯ ಚಲನಚಿತ್ರ ನಟ, ನಿರ್ದೇಶಕ, ನಿರ್ಮಾಪಕ, ಪತ್ರಕರ್ತ ಕು.ವಿಶ್ವಪ್ರಕಾಶ ಟಿ ಮಲಗೊಂಡ, ಬಾಬುಗೌಡ ಮ ಬಿರಾದಾರ, ಕಾಶಿನಾಥ ಅ ತೆಲಸಂಗ, ವಿಠ್ಠಲ ಹ ಅರ್ಜುಣಗಿ, ಹಿರೇಬೇವನೂರ ಮಾಜಿ ಸೈನಿಕ ಶ್ರೀಶೈಲ ಹ ಅರ್ಜುಣಗಿ, ಇಂಡಿ ತಾಲೂಕಾ ಕನ್ನಡಿಗರ ವಿಜಯಸೇನೆ ಅಧ್ಯಕ್ಷ ಈರಣ್ಣ ಸುರೇಶ ನಾವಿ, ಶ್ರೀ ಮಠದ ಕಮಿಟಿ ಸದಸ್ಯರು ಹಾಗೂ ಹಿಕ್ಕನಗುತ್ತಿ ಗ್ರಾಮದ ಸಮಸ್ಥ ಸದ್ಭಕ್ತರು ಸೇರಿದಂತೆ ನಾನಾ ಕಡೆ ಭಕ್ತರು ಭಾಗವಹಿಸಿದ್ದರು.

## ಪತ್ನಿ ಕೊಂದ ಪತಿಗೆ ಜೀವಾವಧಿ ಶಿಕ್ಷೆ

**ಚಾಮರಾಜನಗರ:** ವರದಕ್ಷಿಣೆ ಕಿರುಕುಳ ನೀಡಿ ಪತ್ನಿಯನ್ನು ಕೊಲೆ ಮಾಡಿದಪತಿಗೆ ಜೀವಾವಧಿ ಶಿಕ್ಷೆ ಮತ್ತು ದಂಡವನ್ನು ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಘನ ಅಪರಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶ ಶ್ರೀಕಾಂತ್ ರವರು ಆದೇಶ ಮಾಡಿದ್ದಾರೆ. ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ತೀರ್ಥ ಗ್ರಾಮದ ಆನಂದ ಶ್ಯಾಮ ಕಾಂಬಳೆ ಎಂಬಾತ ಜೀವಾವಧಿ ಶಿಕ್ಷೆಗೆ



ಗುರಿಯಾದ ವ್ಯಕ್ತಿ. ಇವರ ಪತ್ನಿ ಜಮಖಂಡಿ ತಾಲೂಕಿನ ಚಿದಾನಂದ ವಿಠಲ ಕಾಂಬಳೆ ಅವರ ಪುತ್ರಿ. ಆನಂದ್ ಶ್ಯಾಮ್ ಕಾಂಬ್ಳೆ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಮಂಗಲ ಗ್ರಾಮ ಪಂಚಾಯಿತಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದು,ಅಂದಿನಿಂದಲೂ ವರದಕ್ಷಿಣೆ ಕಿರುಕುಳ ನೀಡಿ ಮಾನಸಿಕವಾಗಿ ಹಿಂಸೆ ನೀಡುತ್ತಿದ್ದು, 2022ರ ಮಾರ್ಚ್ 14 ರಂದು ರಾತ್ರಿ ಪತ್ನಿಯನ್ನು ವಿದ್ಯಾ ಶ್ರೀ ಕುತ್ತಿಗೆಯನ್ನು ಬಲವಾಗಿ ಹಿಸುಕಿ ಕೊಲೆ ಮಾಡಿ ಸಾಕ್ಷಿಗಳನ್ನು ನಾಶ ಮಾಡುವ ಉದ್ದೇಶದಿಂದ ನೇಣು ಹಾಕಿ ನಂತರ ಕೆಳಕ್ಕೆ ಇಳಿಸಿ ಮಂಚದ ಮೇಲೆ ಮಲಗಿಸಿದ್ದ ಎಂದು ಮೃತಳ ದೂರು ನೀಡಿದ್ದರು. ಅಂದಿನ ಎಸ್ಐ ಪ್ರಕರಣ ದಾಖಲಿಸಿಕೊಂಡು ಯಾಲಯಕ್ಕೆದೋಷಾರೋಪಣ ಪಟ್ಟಿ ಸಲ್ಲಿಸಿದ್ದರು. ಸರ್ಕಾರಿ ಅಭಿಯೋಜಕ ಬಿ.ಸಿ.ಮಂಜುನಾಥ್ ಅವರು ವಾದ ಮಂಡಿಸಿದ್ದರು. ವಾದ ವಿವಾದವನ್ನು ಆಲಿಸಿದ ಚಾಮರಾಜನಗರ ಕೊಳ್ಳೇಗಾಲ ಘನ ಅಪರಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶ ಟಿ.ಸಿ. ಶ್ರೀಕಾಂತ್ ಅವರು ಆರೋಪಿಗೆ ಜೀವಾವಧಿ ಶಿಕ್ಷೆ, 10.000 ರೂ. ದಂಡ ವಿಧಿಸಿ ಆದೇಶಮಾಡಿದ್ದು, 2ನೇ ಆರೋಪಿ ಆನಂದ್ ಶ್ಯಾಮ್ ಕಾಂಬ್ಳೆ ಈಗಾಗಲೇ ಮೃತಪಟ್ಟಿದ್ದಾರೆ.

# ಸಂವಿಧಾನ ಮಹಿಳೆಯರ ಪಾಲಿನ ಬೆಳಕು : ಸುಮತಿ

**ಚಾಮರಾಜನಗರ:** ಬಾಲ್ಯ ವಿವಾಹ, ಮಹಿಳಾ ಕಾರ್ಮಿಕರ ಶೋಷಣೆ, ಅತ್ಯಾಚಾರ ಮೊದಲಾದ ಅನಿಷ್ಟಪದ್ಧತಿ ವಿರುದ್ಧ ಹೋರಾಟ ರೂಪಿಸಲು ಸಂವಿಧಾನ ಮಹಿಳೆಯರ ಪಾಲಿನ ಬೆಳಕಾಗಿದೆ ಎಂದು ಹಿರಿಯರಂಗ ನಿರ್ದೇಶಕಿ ಕೆ.ಆರ್. ಸುಮತಿಹೇಳಿದರು.

ಮೈಸೂರಿನಕಲಾಮಂದಿರದಲ್ಲಿರುವ ಕಿರು ರಂಗಮಂದಿರದಲ್ಲಿ ಚಾಮರಾಜನಗರದ ರಂಗವಾಹಿನಿ, ನೆಲೆ ಹಿನ್ನೆಲೆ, ಜೆಪಿಐಆರ್ ರಂಗತಂಡಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಎರಡು ದಿನಗಳ ರಾಜ್ಯಮಟ್ಟದ ಸಂಚಿ ಹೊನ್ನಮ್ಮ ನಾಟಕೋತ್ಸವ ಹಾಗೂ ಸಂಚಿ ಹೊನ್ನಮ್ಮ ಮಹಿಳಾ ಪ್ರಶಸ್ತಿ ಪ್ರದಾನಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿ, ಸ್ತ್ರೀಪರ ನಿಲುವಿನ ಮತ್ತು ಶೋಷಣೆಯವಿರುದ್ಧ ಧ್ವನಿಯಾಗಿರುವ ಗುಲಾಬಿ ಗ್ಯಾಂಗು ನಾಟಕಪ್ರದರ್ಶನ ನಿಜಕ್ಕೂ ಅರ್ಥಪೂರ್ಣವಾಗಿದೆ. ಹೆಣ್ಣುಸ್ವಾತಂತ್ರ್ಯಕ್ಕೆ ಅರ್ಹಳಲ್ಲ ಎಂಬ ಕಾಲದಿಂದಲೂ ಆಕೆಶಿಕ್ಷಣ, ಸಾಮಾಜಿಕ, ರಾಜಕೀಯ ಮತ್ತು ಆರ್ಥಿಕಸ್ಥಾನಮಾನಗಳಿಂದ ವಂಚಿತಳಾಗಿದ್ದಳು. ಇಂದುಮಹಿಳೆ ಪ್ರಗತಿ ಸಾಧಿಸಲು ಸಂವಿಧಾನ ಮತ್ತು ಬಾಬಾ ಸಾಹೇಬ್ ಡಾ. ಬಿಆರ್ ಅಂಬೇಡ್ಕರ್ಕಾರಣ ಎಂದು ಹೇಳಿದರು.

ಸಂಚಿ ಹೊನ್ನಮ್ಮ ಪ್ರಶಸ್ತಿಪುರಸ್ಕೃತರಾದ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕಿ ಪ್ರೊ. ಎನ್. ಕೆ ಲೋಲಾಕ್ಷಿ ಮಾತನಾಡಿ, ಸಂಚಿ ಹೊನ್ನಮ್ಮ ಕ್ರಿಸ್ತಶಕ 1680 ರಲ್ಲಿ ಮೈಸೂರಿನಚಿಕ್ಕದೇವರಾಜ ಒಡೆಯರ ಸಂಚಿಯ ಊಳಿಗದಲ್ಲಿ ಇದ್ದ ಮಹಿಳೆ. ಈಕೆ ಆಗಿನ ಮೈಸೂರು ಜಿಲ್ಲೆ ಈಗಿನಚಾಮರಾಜನಗರ ಜಿಲ್ಲೆಯ ಯಳಂದೂರಿನಲ್ಲಿಹುಟ್ಟಿದವಳು ಎಂದರು.

ಸಂದರ್ಭದಲ್ಲಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕಿ ಪ್ರೊ. ಎನ್. ಕೆ. ಲೋಲಾಕ್ಷಿ, ಚಾಮರಾಜನಗರ ನಗರಸಭಾ ಮಾಜಿ ಅಧ್ಯಕ್ಷೆ ಹಾಗೂ ಹಾಲಿ ಸದಸ್ಯೆ ಚಿನ್ನಮ್ಮ ಸಿದ್ದರಾಮಯ್ಯ, ಖ್ಯಾತರಂಗ ನಟಿ ನಯನ ಸೂಡ, ಚಿತ್ರ ಕಲಾವಿದೆ ಸ್ಪಂದನ ರಾಮೇಶ್ವರ ಅವರಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಜಂಟಿ ನಿರ್ದೇಶಕ ವಿ ಮಲ್ಲಿಕಾರ್ಜುನ ಸ್ವಾಮಿ ಅವರು ರಾಜ್ಯಮಟ್ಟದ ಸಂಚಿಹೊನ್ನಮ್ಮ ಪ್ರಶಸ್ತಿ ಪ್ರದಾನಮಾಡಿದರು.

ಹಾಸನದ ವಾಣಿಜ್ಯ ತೆರಿಗೆ ಇಲಾಖೆಯಉಪ ಆಯುಕ್ತ ಡಿ ಎಂ ಮಂಜುನಾಥ ಅಧ್ಯಕ್ಷತೆವಹಿಸಿದರು. ಸಮಾಜ ಸೇವಕ ಕೆರೆಹಳ್ಳಿ ವೆಂಕಟೇಶಪ್ರಸಿದ್ದ ರಂಗ ನಟ ಹರಿದತ್ತ ನೆಲೆ ಹಿನ್ನೆಲೆ ಸಂಸ್ಥೆಯಕೆಆರ್ ಗೋಪಾಲಕೃಷ್ಣ ರಂಗವಾಹಿನಿ ಸಂಸ್ಥೆಯಅಧ್ಯಕ್ಷಸಿಎಂ ನರಸಿಂಹಮೂರ್ತಿ ಸಂಚಾಲಕ ರೂಬಿನ್ ಸಂಜಯ್ ಜಗ್ಗು ಜಾದುಗಾರ ಮೊದಲಾದವರು ಹಾಜರಿದ್ದರು.



# ಮಧ್ಯವರ್ತಿಗಳ ಹಾವಳಿ ಖಂಡಿಸಿ ಪ್ರತಿಭಟನೆ

**ಚಾಮರಾಜನಗರ:** ಚಾಮರಾಜನಗರ-ನಗರಸಭೆಯಲ್ಲಿ ಮಧ್ಯವರ್ತಿಗಳ ಹಾವಳಿ ಹೆಚ್ಚಾಗಿದೆ ಎಂದು ಆರೋಪಿಸಿ ಸುವರ್ಣ ಕನ್ನಡ ರಕ್ಷಣಾ ವೇದಿಕೆ ವತಿಯಿಂದ ನಗರ ಸಭೆ ಕಾರ್ಯಾಲಯದ ಮುಂದೆ ಪ್ರತಿಭಟನೆ ನಡೆಯಿತು.

ಚಾಮರಾಜನಗರದ ನಗರಸಭೆ ಕಚೇರಿ ಮುಂಭಾಗ ಜಮಾಯಿಸಿದ ಪ್ರತಿಭಟನಾಕಾರರು ನಗರಸಭೆ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕೆಲಕಾಲ ಪ್ರತಿಭಟನೆ ನಡೆಸಿದರು.

ನಗರಸಭೆಯಲ್ಲಿ ಸಾರ್ವಜನಿಕ ಕೆಲಸ ಕಾರ್ಯಗಳು ಸರಿಯಾಗಿ ನಡೆಯುತ್ತಿಲ್ಲ. ಸಾರ್ವಜನಿಕರು ಇ ಸ್ವತ್ತು ಮಾಡಲು ಅಧಿಕಾರಿಗಳು ಕೇಳಿದ ದಾಖಲೆಗಳನ್ನು ಒದಗಿಸಿದರೂ ಕೂಡ ಯಾವುದೇ ಕೆಲಸ ಆಗುತ್ತಿಲ್ಲ. ನಗರಸಭೆಯಲ್ಲಿ ಮಧ್ಯವರ್ತಿಗಳು 20-25 ಸಾವಿರ ರೂ.ಗಳನ್ನು ವಸೂಲಿ ಮಾಡುತ್ತಿದ್ದಾರೆ. ಮಧ್ಯವರ್ತಿಗಳಿಗೆ ಹಣ ಕೊಟ್ಟರೆ ಒಂದು ತಿಂಗಳಲ್ಲೇ ಇ ಸ್ವತ್ತು ಆಗುತ್ತದೆ. ಇಲ್ಲಿನ ಅಧಿಕಾರಿಗಳು ಮಧ್ಯವರ್ತಿಗಳೊಂದಿಗೆ ಶಾಮೀಲಾಗಿ ಲಂಚ ಪಡೆದು ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.



ನಗರಸಭೆಯಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ. ಅನೇಕ ಕಡೆ ಮಳೆ ಬಂದಾಗು ಚರಂಡಿಯ ನೀರು ರಸ್ತೆಯಲ್ಲಿಯೇ ಹರಿಯುತ್ತದೆ. ಆದರೆ, ಅಧಿಕಾರಿಗಳು ಸರಿಪಡಿಸಲು ಮುಂದಾಗುತ್ತಿಲ್ಲ. ಜೊತೆಗೆ ಹಲವು ಕಡೆ ಕಳಪೆ ಕಾಮಗಾರಿ ಮಾಡಲಾಗಿದೆ. ಪ್ರಮುಖ ರಸ್ತೆಗಳಲ್ಲಿ ಬೀದಿ ದೀಪಗಳಿಲ್ಲದೇ ಓಡಾಡಲು ಆಗದ ಸ್ಥಿತಿ ಇದೆ. ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ನಗರಸಭೆಯಲ್ಲಿನ ಅವ್ಯವಸ್ಥೆಯನ್ನು ಸರಿಪಡಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಎಚ್ಚರಿಸಿದರು. ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಪೌರಾಯುಕ್ತ ರಾಮದಾಸ್ ಅವರಿಗೆ ಮನವಿ ಸಲ್ಲಿಸಿ ಪ್ರತಿಭಟನೆಯನ್ನು ಅಂತ್ಯಗೊಳಿಸಲಾಯಿತು.

ಪ್ರತಿಭಟನೆಯಲ್ಲಿ ವೇದಿಕೆಯ ಜಿಲ್ಲಾಧ್ಯಕ್ಷ ಸಿದ್ದರಾಜು, ಪದಾಧಿಕಾರಿಗಳಾದ ಆನಂದ, ಶಿವಣ್ಣ, ಮರಣ್ಣಶೆಟ್ಟಿ ಸೇರಿದಂತೆ ಇತರರು ಭಾಗವಹಿಸಿದ್ದರು.

### ಉದ್ಯಾನವನದಲ್ಲಿ ದಾಸೋಹಹುಣ್ಣಿಮೆ ಆಚರಣೆ

# ಸಿದ್ದಗಂಗಾಶ್ರೀಗಳ ದಾಸೋಹ ಸೇವೆ ಅವಿಸ್ಮರಣೀಯ

**ಮಂಡ್ಯ :** ಹಸಿದು ಬಂದವರಿಗೆ ಅನ್ನ ನೀಡುವುದೇ ನಿಜವಾದ ಧರ್ಮ ಎಂಬ ಆದರ್ಶವನ್ನು ಜಗತ್ತಿಗೆ ಸಾರಿ ಸಹಸ್ರಾರು ಮಂದಿ ಬಡ ವಿದ್ಯಾರ್ಥಿಗಳ ಬಾಳನ್ನು ಹಸನುಗೊಳಿಸಿದ ತ್ರಿವಿಧ ದಾಸೋಹಮೂರ್ತಿ, ಪದ್ಮಭೂಷಣ, ಕರ್ನಾಟಕ ರತ್ನ, ಪರಮಪೂಜ್ಯ ಡಾ. ಶ್ರೀ ಶಿವಕುಮಾರಮಹಾಸ್ವಾಮೀಜಿಯವರ ದಾಸೋಹ ಸೇವೆ ಸೂರ್ಯ ಚಂದ್ರರಿರುವ ತನಕ ಅಮರವಾಗಿರುತ್ತದೆ ಎಂದು ಯೋಗಶಿಕ್ಷಕ ಹೆಚ್ .ವಿ.ಶಿವರುದ್ರಸ್ವಾಮಿ ಹೇಳಿದರು.



ನಗರದ ಸ್ವರ್ಣಸಂದ್ರ,ಬಡಾವಣೆಯಲ್ಲಿರುವ ಸಿದ್ದಗಂಗಾಶ್ರೀಗಳ ಉದ್ಯಾನವನದಲ್ಲಿ ಕಾಯಕಯೋಗಿ ಫೌಂಡೇಶನ್ ಹಾಗೂ ಸಿದ್ದಗಂಗಾಶ್ರೀಸೇವಾ ಸಮಿತಿ ವತಿಯಿಂದ ಪ್ರತಿ ತಿಂಗಳು ನಡೆಯುವ ' ಸಿದ್ದಗಂಗಾಶ್ರೀ ದಾಸೋಹ ಹುಣ್ಣಿಮೆ' ಕಾರ್ಯಕ್ರಮದಲ್ಲಿ ದಾಸೋಹಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಹಸಿವಿನ ಮಹತ್ವವನ್ನು ಅರಿತಿದ್ದ ಸಿದ್ದಗಂಗಾಮಠ ಸ್ವಾತಂತ್ರ್ಯ ಪೂರ್ವದಿಂದಲೇ ಜಾತಿ, ಧರ್ಮ, ವರ್ಣ, ವರ್ಗಗಳ ಬೇಧವನ್ನು ಕಿತ್ತೊಗೆದು ಸರ್ವರಿಗೂ ವಿದ್ಯೆ, ಅನ್ನ, ಆಸರೆಯಂತಹ ತ್ರಿವಿಧ ದಾಸೋಹವನ್ನು ಉಣಬಡಿಸುತ್ತಲೇ ಬಂದಿದೆ. ಹತ್ತು ಸಾವಿರಕ್ಕೂ ಹೆಚ್ಚು ಮಂದಿಗೆ ಶ್ರೀಸಿದ್ದಗಂಗಾಮಠ ಉಚಿತ ಶಿಕ್ಷಣ ನೀಡುತ್ತಾ ಬಂದಿರುವುದು ಎಲ್ಲಾ ಮಠಗಳಿಗೂ ಆದರ್ಶಪ್ರಾಯವಾಗಿದೆ ಎಂದರು.

ಕಾಯಕಯೋಗಿ ಫೌಂಡೇಶನ್ ಅಧ್ಯಕ್ಷ ಎಂ.ಶಿವಕುಮಾರ್ ಮಾತನಾಡಿ, ವಿಶ್ವಗುರು ಬಸವಣ್ಣನವರು ಹನ್ನೆರಡನೇ ಶತಮಾನದಲ್ಲೇ ಕಾಯಕ-ದಾಸೋಹ ಎರಡರ ಮಹತ್ವವನ್ನು ತಮ್ಮ ವಚನಗಳ ಮೂಲಕ ತಿಳಿಸಿ ಬದುಕುವ ದಾರಿಯನ್ನು ತೋರಿದ್ದಾರೆ. ಸಿದ್ದಗಂಗಾಶ್ರೀಗಳು ಅಣ್ಣನವರ ಆದರ್ಶಗಳನ್ನು 21ನೇ ಶತಮಾನದಲ್ಲಿ ಅನುಷ್ಠಾನಕ್ಕೆ ತಂದ ಮಹಾನ್ ಸಂತರಾಗಿದ್ದು ಶ್ರೀಗಳ ಶುಭನಾಮದಲ್ಲಿ ಪ್ರತಿ ಹುಣ್ಣಿಮೆಯ ದಿನದಂದು ದಾಸೋಹಹುಣ್ಣಿಮೆ ಆಚರಿಸಲಾಗುತ್ತಿದೆ ಎಂದರು.

'ಸೋಹಂ ಎನಿಸದೆ ದಾಸೋಹಂ' ಎಂದೆನಿಸಯ್ಯ ಎಂಬ ಶರಣರ ತತ್ವವನ್ನು ಪ್ರತಿಯೊಬ್ಬರೂ ಅರಿತಾಗ ಸಮಸಮಾಜ ನಿರ್ಮಾಣವಾಗಲು ಸಾಧ್ಯವಾಗುತ್ತದೆ. ಅಹಂಕಾರವನ್ನು ತೊರೆದು ನಿರಹಂಕಾರಿಯಾಗಿ ಬಡಿಸುವುದೇ 'ದಾಸೋಹ'. ಹಸಿದು ಬಂದವರಿಗೆ ಅನ್ನ, ವಿದ್ಯೆ ಇಲ್ಲದವರಿಗೆ ಶಿಕ್ಷಣ, ಅನಾಥರಿಗೆ ಆಶ್ರಯದಂತಹ ಪುಣ್ಯದ ಕೆಲಸಗಳನ್ನು ಮಾಡುವುದರಿಂದ ದೇವರನ್ನು ಕಾಣಬಹುದೇ ಹೊರತು ಕಾಲ್ಪನಿಕ ದೇವರುಗಳನ್ನು ಹುಡುಕುತ್ತಾ, ಹರಕೆ ಹೊತ್ತು ಸಮಯವನ್ನು ವ್ಯರ್ಥ ಮಾಡದೆ ದೀನ ದಲಿತರ, ಬಡಜನತೆಯ ಸೇವೆಯನ್ನೇ ದೈವವನ್ನಾಗಿಸಿಕೊಂಡಾಗ ಜೀವನ ಸಾರ್ಥಕವಾಗುತ್ತದೆ ಎಂದರು.

ಲಿಂಗಾಯತ ಮಹಾಸಭಾ ಅಧ್ಯಕ್ಷ ಎಂ.ಎಸ್. ಮಂಜುನಾಥ್ ಬೆಟ್ಟಹಳ್ಳಿ ಮಾತನಾಡಿ, ಸಕ್ಕರೆ ನಾಡು ಮಂಡ್ಯ ನಗರಕ್ಕೆ ಪ್ರವೇಶಸುತ್ತಿದ್ದಂತೆಯೇ ಕೈ ಬೀಸಿ ಕರೆಯುವ ಹಸಿರಿನ ಸುಂದರವಾದ ಸಿದ್ದಗಂಗಾಶ್ರೀಗಳ ಉದ್ಯಾನವನ ಮನಸ್ಸಿಗೆ ಆನಂದವನ್ನುಂಟು ಮಾಡುತ್ತದೆ. ಕಳೆದ ಹತ್ತಾರು ವರ್ಷಗಳ ಹಿಂದೆ ಪಾಳುಬಿದಿದ್ದ ಈ ಜಾಗವನ್ನು ಅಚ್ಚಹಸಿರಿನಿಂದ ಕಂಗೊಳಿಸುವಂತೆ ಮಾಡಿ ಪೂಜ್ಯಸಿದ್ದಗಂಗಾಶ್ರೀಗಳ ಹೆಸರಿನಲ್ಲಿ ಪ್ರತಿ ತಿಂಗಳು ದಾಸೋಹ ಹುಣ್ಣಿಮೆ ಆಚರಿಸಿ ನೂರಾರು ಮಂದಿಗೆ ಅನ್ನಸಂತರ್ಪಣೆ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಕಾಯಕಯೋಗಿ ಫೌಂಡೇಶನ್ ನಿರ್ದೇಶಕರಾದ ತಬ್ರೈಜ್ ಖಾನ್, ಸಾಗರ್, ನಟರಾಜ್, ಮುಖಂಡರಾದ ಬೆಳ್ಳಪ್ಪ, ಆಟೋ ರಾಜು, ಶಶಿಕಲಾ, ಮಹದೇವಪ್ಪ, ಪಂಚಲಿಂಗಯ್ಯ, ಪಾಪಣ್ಣ ಮತ್ತಿತರರು ಉಪಸ್ಥಿತರಿದ್ದರು.

## ಸಂಜೆ ಟಿಪ್ಸ್

## ಸಲ್ಮಾನ್ ಖಾನ್ ಒಪ್ಪಿಕೊಂಡ ಸತ್ಯ

ಸಲ್ಮಾನ್ ಖಾನ್ ಬಾಲಿವುಡ್ ನ ಮೋಸ್ಟ್ ಎಲಿಜಿಬಲ್ ಬ್ಯಾಚ್ಯುಲರ್ ಎಂದೇ ಹೆಸರು ಪಡೆದವರು.ಸಲ್ಮಾನ್ ಖಾನ್ ಗೆ ಪ್ರತಿಯೊಂದು ಕಾರ್ಯಕ್ರಮದಲ್ಲಿ ಎದುರಾಗುವ ಪ್ರಶ್ನೆ ಮದುವೆ ಯಾವಾಗ? ಪ್ರತಿ ಬಾರಿ ಈ ಪ್ರಶ್ನೆ ಎದುರಾದಾಗಲೂ ಸಲ್ಮಾನ್ ನಕ್ಕು ಆ ಪ್ರಶ್ನೆಯಿಂದ ಜಾರಿಕೊಳ್ಳುತ್ತಾರೆ. ಇನ್ನೂ ಮದುವೆಯಾಗಿಲ್ಲ ಎಂದರೆ ಸಲ್ಮಾನ್ ಗೆ ಮದುವೆ ಮೇಲೆ ಆಸಕ್ತಿ ಇಲ್ಲ ಎಂದಲ್ಲ.ಸಲ್ಮಾನ್ ಗರ್ಲ್ ಫ್ರೆಂಡ್ಸ್ ಗಳಪಟ್ಟಿ ಬಹಳ ದೊಡ್ಡದಿದೆ. ಖ್ಯಾತ ನಟಿಯರೊಂದಿಗೆ ಸಲ್ಮಾನ್ ಹೆಸರು ಥಳುಕು ಹಾಕಿಕೊಂಡಿದೆ. ಕೆಲವು ನಟಿಯರ ಜೊತೆ ಇನ್ನೇನು ಮದುವೆ ಪಕ್ಕಾ ಎನ್ನುವ ಮಾತು ಕೂಡಾ ಬಾಲಿವುಡ್ ಅಂಗಳದಲ್ಲಿ ಜೋರಾಗಿಯೇ ಕೇಳಿಬಂದಿತ್ತು.ಇನ್ನೊಂದು ಮೂಲದ ಪ್ರಕಾರ ಒಂದು ಕಾಲದಲ್ಲಿ ಸಲ್ಮಾನ ಮದುವೆಯ ಆಮಂತ್ರಣ ಪತ್ರಿಕೆ ಕೂಡಾ ಪ್ರಿಂಟ್ ಮಾಡಿಸಿದ್ದರಂತೆ.ಆದರೆ ಕೊನೆ ಘಳಿಗೆಯಲ್ಲಿ ಮದುವೆ ನಿರ್ಧಾರ ಬದಲಾಗಿದೆ. ಈಗ ವಯಸ್ಸು 58 ಆದರೂ ಗರ್ಲ್ ಫ್ರೆಂಡ್ಸ್, ಲವರ್ ಗರ್ಲ್ಸ್ ಇದ್ದರೂ ಸಲ್ಮಾನ್ ಇಂದಿಗೂ ಒಂಟಿ. ತಾನು ಯಾಕೆ ಇನ್ನೂ ಮದುವೆಯಾಗಿಲ್ಲ ಎನ್ನುವುದಕ್ಕೆ ಖುದ್ದು ಸಲ್ಮಾನ್ ಖಾಸಗಿ ವಾಹಿನಿಯೊಂದರ ಆಪ್ ಕಿ ಅದಾಲತ್ ಕಾರ್ಯಕ್ರಮದಲ್ಲಿ ಉತ್ತರಿಸಿದ್ದಾರೆ. ಮದುವೆಯಾಗುವ ಎಲ್ಲಾ ಇರಾದೆ ಇತ್ತು.ಆದರೆ ಯಾಕೋ ಮದುವೆಯಾಗಬೇಕು ಅಂದುಕೊಂಡವರೆಲ್ಲಾ ಒಬ್ಬೊಬ್ಬರೇ ಬಿಟ್ಟು ಹೋಗುವುದಕ್ಕೆ ಆರಂಭಿಸಿದರು. ಮೊದಲನೇ ಹುಡುಗಿ ಹೋದಾಗ ತಪ್ಪು ಆಕೆಯದ್ದೇ ಅಂದುಕೊಂಡೆ. ಎರಡನೇ ಹುಡುಗಿ ಬಿಟ್ಟು ಹೋದಾಗಲೂ ಕೊರತೆ ಇರುವುದು ಆಕೆಯಲ್ಲಿಯೇ ಅಂದುಕೊಂಡೆ. ಮೂರನೆ, ನಾಲ್ಕನೇ ಹುಡುಗಿ ಕೂಡಾ ಹೀಗೆ ಮಾಡಿದಾಗ ಯೋಚನೆ 60 ★40 ಕ್ಕೆ ಬಂತು. ಆದರೆ ಇದು ಮುಂದುವರೆದುಕೊಂಡು ಹೋದಾಗ ಕೊರತೆ ಇರುವುದು ನನ್ನಲ್ಲಿಯೇ ಎನ್ನುವುದು ಸಾಬೀತಾಯಿತು ಎಂದಿದ್ದಾರೆ. ಬಹುಶಃಹುಡುಗಿಯರ ನಿರೀಕ್ಷೆಯನ್ನುನಾನು ಮುಟ್ಟುತ್ತಿಲ್ಲ.ಅವರು ಬಯಸುವ ಜೀವನ ನಾನು ಕೊಡಬಲ್ಲೆನಾ ಎನ್ನುವ ಬಗ್ಗೆ ನನಗೆ ಅಂಜಿಕೆ ಇದೆ.ಹಾಗಾಗಿ ನಾನೇ ಅವರ ನಿರೀಕ್ಷೆಯ ಮಟ್ಟ ತಲುಪಿಲ್ಲ ಎನ್ನುವ ಸತ್ಯವನ್ನು ನಾನು ಒಪ್ಪಿಕೊಂಡಿದ್ದೇನೆ ಎಂದು ಯಾವ ಅಳುಕೂ ಇಲ್ಲದೆ ಸಲ್ಮಾನ್ ಒಪ್ಪಿಕೊಂಡಿದ್ದಾರೆ. : ಈ ಬಾರಿ ಬಿಗ್ಬಾಸ್ ಮನೆಗೆ ಎಂಟ್ರಿಕೊಡಲಿದ್ದಾರೆ ಸಲ್ಮಾನ್ ಖಾನ್ ಮಾಜಿ ಗೆಳತಿ! ಐಶ್ವರ್ಯ ರೈ ಅಥವಾ ಕತ್ರಿನಾ ಕೈಫ್? ಇದರ ಜೊತೆಗೆ ನನಗೆ ಮದುವೆಯಾಗದಿದ್ದರೂ ಮಗು ಹೊಂದುವ ಆಸೆ ಇತ್ತು.ಆದರೆ ಬದಲಾದ ಕಾನೂನು ವ್ಯವಸ್ಥೆಯಿಂದ ಅದು ಸ್ವಲ್ಪ ಕಷ್ಟವಾಯಿತು.ಮಕ್ಕಳೆಂದರೆ ನನಗೆ ತುಂಬಾ ಇಷ್ಟ.ಆದರೆ ಏನು ಮಾಡುವುದು ಈಗ ಮಗು ಬೇಕು ಎಂದರೆ ತಾಯಿ ಕೂಡಾ ಜೊತೆಯಲ್ಲಿ ಬರುತ್ತಾಳೆ ಎಂದು ಹೇಳುತ್ತಾ ಜೋರಾಗಿ ನಕ್ಕಿದ್ದಾರೆ.

# ಟೊಮ್ಯಾಟೋ ಸೇವ್

## ಪಾಕ ಶಾಲೆ



### ಬೇಕಿರುವ ಸಾಮಗ್ರಿ

**ಟೊಮೆಟೊ- 1, ಕಡಲೆ ಹಿಟ್ಟು - 2 ಬಟ್ಟಲು, ಅಕ್ಕಿ ಹಿಟ್ಟು - ಅರ್ಧ ಕಬಟ್ಟಲುಪ್ ಅರಿಶಿಣದ ಪುಡಿ- ಅರ್ಧ ಚಮಚ, ಕಾಶ್ಮೀರಿ ಚಿಲ್ಲಿ ಪೌಡರ್- 1 ಚಮಚ, ಇಂಗು- ಚಿಟಿಕೆ, ಉಪ್ಪು - 1 ಚಮಚ, ಬೆಣ್ಣೆ - 2 ಚಮಚ, ಓಂಕಾಳು - ಅರ್ಧ ಚಮಚ, ಎಣ್ಣೆ - ಕರಿಯಲು.**

### ಮಾಡುವ ವಿಧಾನ

ಮೊದಲಿಗೆ ಟೊಮೆಟೊವನ್ನು ಮಿಕ್ಸಿ ಜಾರ್ಗೆ ಹಾಕಿ ನೀರು ಹಾಕದಂತೆ ನುಣ್ಣಗೆ ರುಬ್ಬಿಕೊಳ್ಳಿ. ಬಳಿಕ ಒಂದು ದೊಡ್ಡ ಬಟ್ಟಲಿನಲ್ಲಿ ಜರಡಿ ಹಿಡಿದು ಕಡಲೆ ಹಿಟ್ಟು, ಅಕ್ಕಿ ಹಿಟ್ಟು, ಅರಿಶಿನ, ಮೆಣಸಿನ ಪುಡಿ, ಇಂಗು ಮತ್ತು ಉಪ್ಪು ಸೇರಿಸಿ ಉಂಡೆಗಳಿಲ್ಲದಂತೆ ಮಿಶ್ರಣ ಮಾಡಿ. ಈ ಮಿಶ್ರಣಕ್ಕೆ ಬೆಣ್ಣೆ ಹಾಗೂ ಓಂಕಾಳು ಸೇರಿಸಿ ಮಿಶ್ರಣ ಮಾಡಿ. ಟೊಮೆಟೊ ಪ್ಯೂರಿಯಲ್ಲಿ ಬೀಜ ಹಾಗೂ ಸಿಪ್ಪೆಗಳಿಲ್ಲ ಎಂಬುದನ್ನು ಖಚಿತಪಡಿಸಿಕೊಳ್ಳಲು ಸೋಸಿ, ಕಡಲೆ ಹಿಟ್ಟಿನ ಮಿಶ್ರಣಕ್ಕೆ ಹಾಕಿ ಎಲ್ಲವನ್ನೂ ಚೆನ್ನಾಗಿ ಮಿಶ್ರಣ ಮಾಡಿ. ಈಗ ಅಗತ್ಯಕ್ಕೆ ತಕ್ಕಂತೆ ನೀರನ್ನು ಸೇರಿಸಿ ಚಕ್ಕುಲಿ ಹಿಟ್ಟಿನ ಹದದಂತೆ ಮೃದುವಾದ ಹಿಟ್ಟನ್ನು ತಯಾರಿಸಿ. ನಂತರ ಸಣ್ಣ ಸಣ್ಣ ರಂಧ್ರಗಳಿರುವ ಚಕ್ಕುಲಿ ಮೇಕರ್ ತೆಗೆದುಕೊಂಡು, ಒಳ ಭಾಗದಲ್ಲಿ ಸ್ವಲ್ಪ ಎಣ್ಣೆ ಹಚ್ಚಿ, ಚೆಂಡಿನ ಗಾತ್ರದ ಮಿಶ್ರಣವನ್ನು ಚಕ್ಕುಲಿ ಮೇಕರ್ ಒಳಗೆ ಹಾಕಿ ತಯಾರಿಸಿಡಿ. ಕಾದ ಎಣ್ಣೆಯಲ್ಲಿ ಸೇವ್ ಅನ್ನು ಒತ್ತಿ, ಒಂದು ಸುತ್ತು ವೃತ್ತವಾಗಿ ಹರಡಿ. ಈಗ ಸೇವ್ ಅನ್ನು ಗರಿಗರಿಯಾಗಿ ಚಿನ್ನದ ಬಣ್ಣ ಬರುವವರೆಗೆ ಹುರಿಯಿರಿ. ಬಳಿಕ ಸೇವ್ ಅನ್ನು ಎಣ್ಣೆಯಿಂದ ತೆಗೆದು, ಟಿಶ್ಯೂ ಪೇಪರ್ ಮೇಲೆ ಹಾಕಿ. ಇದೀಗ ರುಚಿಕರವಾದ ಟೊಮೆಟೊ ಸೇವ್ ಸವಿಯಲು ಸಿದ್ಧ.

# ಉದಯೋನ್ಮುಖ ಗ್ರಾಮೀಣ ನೃತ್ಯಪ್ರತಿಭೆ ಖುಷಿ ರಂಗಪ್ರವೇಶ





ಗ್ರಾಮೀಣ ಪ್ರತಿಭೆಯಾಗಿ ಉತ್ತಮ ಹೆಸರು ಗಳಿಸಿರುವ ಅಂತರರಾಷ್ಟ್ರೀಯ ನೃತ್ಯಪಟು-ಗುರು ವಿದ್ವಾನ್ ಕೋಲಾರ ರಮೇಶ್, ದೇಶ-ವಿದೇಶಗಳಲ್ಲಿ ಪ್ರತಿಷ್ಠಿತ ವೇದಿಕೆಗಳಲ್ಲಿ, ಅಸಂಖ್ಯಾತ ನೃತ್ಯಪ್ರದರ್ಶನಗಳನ್ನು ಮತ್ತು ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಸಮ್ಮುಖ ಶಿಷ್ಯರ ನೃತ್ಯಪ್ರದರ್ಶನ ಪ್ರಸ್ತುತಪಡಿಸಿ ಪ್ರಶಂಸೆ ಪಡೆದವರು ಎಂಬುದು ವಿಶೇಷ ಸಂಗತಿ. ಹೊಸಕೋಟೆಯಲ್ಲಿ ನೃತ್ಯಶಾಲೆಯನ್ನು ಯಶಸ್ವಿಯಾಗಿ ಮುನ್ನಡೆಸುತ್ತಿರುವ ರಮೇಶ ಅವರ ಸಮರ್ಥ ಮಾರ್ಗದರ್ಶನದಲ್ಲಿ ತಯಾರಾದ ನೃತ್ಯಕುಸುಮಗಳು ಅಸಂಖ್ಯಾತ ಮತ್ತು ನೃತ್ಯನೈಪುಣ್ಯ ಪಡೆದು ರಂಗಪ್ರವೇಶ ಮಾಡಿದ ಪ್ರತಿಭೆಗಳು ಅನೇಕಾನೇಕ. ಪ್ರಸ್ತುತ ಇವರ ನೇತೃತ್ವದ 'ಶ್ರೀ ನವಚೇತನ ನೃತ್ಯಕಲಾ ಅಕಾಡೆಮಿ'ಯ 48 ನೇ ರಂಗಪ್ರವೇಶವಾಗಿದೆ. ಇವರ ನುರಿತ ಗರಡಿಯಲ್ಲಿ ರೂಹುತಳೆದ ನೃತ್ಯಶಿಲ್ಪ ಕು. ಖುಷಿ ದೇವರಾಜ್ ಶ್ರೀಮತಿ ಸುಜಾತ ಮತ್ತು ದೇವರಾಜ್ ಅವರ ಪುತ್ರಿಯಾಗಿದ್ದು ಈಗಾಗಲೇ ದೆಹಲಿಯೂ ಸೇರಿದಂತೆ ನಾಡಿನಾದ್ಯಂತ ನೃತ್ಯಪ್ರದರ್ಶನಗಳನ್ನು ನೀಡಿದ್ದಾಳೆ. ಈ ಭರವಸೆಯ ಪ್ರತಿಭೆ- ತನ್ನ ನೃತ್ಯದ ವಿವಿಧ ಆಯಾಮಗಳನ್ನು ಪ್ರದರ್ಶಿಸಲು ಇದೇ ತಿಂಗಳ 23 ಶುಕ್ರವಾರ ಮಧ್ಯಾಹ್ನ 2 ಗಂಟೆಗೆ ರವೀಂದ್ರ ಕಲಾಕ್ಷೇತ್ರದಲ್ಲಿ ವಿದ್ಯುಕ್ತವಾಗಿ ತನ್ನ 'ರಂಗಪ್ರವೇಶ' ನೆರವೇರಿಸಿಕೊಳ್ಳಲಿದ್ದಾಳೆ. ಈಕೆಯ ನೃತ್ಯ ಕಲಾಸೊಬಗನ್ನು ಕಣ್ತುಂಬಿಕೊಳ್ಳಲು ಸರ್ವರಿಗೂ ಆದರದ ಸ್ವಾಗತ.

ಕು. ಖುಷಿಗೆ ನೃತ್ಯ ಬಾಲ್ಯದ ಒಲವು. ಪುಟ್ಟಹುಡುಗಿಯಾಗಿದ್ದಾಗಲೇ ನೃತ್ಯ ಕಲಿಯಲಾರಂಭಿಸಿದಳು. ಈ ಹದಿನೆಂಟರ ಬಾಲೆ ಕಳೆದ 5 ವರ್ಷಗಳಿಂದ ವಿ. ರಮೇಶ್ ಅವರಲ್ಲಿ ಬಹು ಆಸಕ್ತಿ- ಬದ್ಧತೆಗಳಿಂದ ಕಲಿಯುತ್ತ 'ಮಾರ್ಗಂ' ಸಂಪ್ರದಾಯದ ಎಲ್ಲ ಕೃತಿಗಳನ್ನೂ ಚೆನ್ನಾಗಿ ಅಭ್ಯಾಸ ಮಾಡಿದ್ದಾಳೆ. ಕರ್ನಾಟಕ ಸರ್ಕಾರ ನಡೆಸುವ ಜ್ಯೂನಿಯರ್ ನೃತ್ಯಪರೀಕ್ಷೆಯಲ್ಲಿ ಪ್ರಥಮ ರ್ಯಾಂಕ್ ಪಡೆದ ಅಗ್ಗಳಿಕೆ ಇವಳದು. ಓದಿನಲ್ಲೂ ಬುದ್ಧಿವಂತೆ. ಹೊಸಕೋಟೆಯ ಮಹದೇವ ಕಾಲೇಜಿನಿಂದ 12 ನೇ ತರಗತಿಯಲ್ಲಿ ಉತ್ತಮಾಂಕಗಳಿಂದ ತೇರ್ಗಡೆಯಾಗಿ ಇದೀಗ 'ಆಕಾಶ್ ಗ್ರೂಪ್ ಆಫ್ ಇನ್ಸ್ಟಿಟ್ಯೂಶನ್ಸ್' ದೇವನಹಳ್ಳಿಯಲ್ಲಿ ಪ್ರಥಮ ವರ್ಷದ ಇಂಜಿನಿಯರಿಂಗ್ ಅಭ್ಯಾಸ ಮಾಡುತ್ತಿರುವ ಖುಷಿಗೆ ನೃತ್ಯದ ಬಗ್ಗೆ ಪ್ರೀತಿ ಅಪಾರ.

ಈ ಗ್ರಾಮೀಣ ನೃತ್ಯಪ್ರತಿಭೆ ಖುಷಿಯ ವೈಶಿಷ್ಟ್ಯವೆಂದರೆ ಹಳ್ಳಿಯಿಂದ ದಿಲ್ಲಿಯವರೆಗೆ ನೂರಾರು ನೃತ್ಯ ಕಾರ್ಯಕ್ರಮಗಳನ್ನು ನೀಡಿ ಕಲಾರಸಿಕರ ಮೆಚ್ಚುಗೆ ಗಳಿಸಿರುವುದು. ದೆಹಲಿ ಕರ್ನಾಟಕ ಸಂಘದ ಅಮೃತ ಮಹೋತ್ಸವದಲ್ಲಿ ಇವಳು ನೀಡಿರುವ ನೃತ್ಯ ಪ್ರದರ್ಶನ ಚಿರಸ್ಮರಣೀಯ. ಉತ್ತಮ ಇಂಜಿನಿಯರಾಗಿ ನಾಡಿಗೆ ಸೇವೆ ಸಲ್ಲಿಸುವ ಆಶಯದೊಂದಿಗೆ ಖುಷಿಗೆ ನೃತ್ಯರಂಗದಲ್ಲಿ ಅಪಾರ ಸಾಧನೆಗೈವ ಆಕಾಂಕ್ಷೆಯೂ ಇದೆ.

**ವೈ.ಕೆ.ಸಂಧ್ಯಾ ಶರ್ಮ**

# ನಿಂಬೆ ಹಣ್ಣಿನ ಎಣ್ಣೆಯ ಪ್ರಯೋಜನ

## ಹೆಲ್ತ್ ಟಿಪ್ಸ್



ನಿಂಬೆ ಹಣ್ಣಿನ ಎಣ್ಣೆಯಿಂದ ಅನೇಕ ಉಪಯೋಗಗಳಿವೆ. ಈ ಎಣ್ಣೆಯು ಆಯಂಟಿ ಫಂಗಲ್, ಆಯಂಟಿ ಬ್ಯಾಕ್ಟೀರಿಯಲ್, ಆಯಂಟಿಮೈಕ್ರೊಬಿಯಲ್ ಮತ್ತು ಆಯಂಟಿ ಇನ್ಫ್ಲಮೇಟರಿ ಗುಣಗಳನ್ನು ಹೊಂದಿದೆ. ಇವು ಹೇರ್ ಕಂಡೀಷನರ್ ಗಳಾಗಿ ಕಾರ್ಯನಿರ್ವಹಿಸುತ್ತವೆ. ನಿಂಬೆ ಎಣ್ಣೆಯಲ್ಲಿರುವ ವಿಟಮಿನ್ಗಳನ್ನು ವಿವಿಧ ಹೇರ್ ಮಾಸ್ಕ್ಗಳಲ್ಲಿಯೂ ಬಳಸಬಹುದು.

ನಿಂಬೆ ಎಣ್ಣೆಯು ಆಂಟಿಫಂಗಲ್, ಬ್ಯಾಕ್ಟೀರಿಯಾ ವಿರೋಧಿ, ಆಂಟಿಮೈಕ್ರೊಬಿಯಲ್ ಮತ್ತು ಉರಿಯೂತದ ಗುಣಲಕ್ಷಣಗಳನ್ನು ಹೊಂದಿದೆ. ಅವರು ಕೂದಲಿಗೆ ಉತ್ತಮ ಕಂಡಿಷನರ್ ಆಗಿ ಕಾರ್ಯನಿರ್ವಹಿಸುತ್ತದೆ. ವಿವಿಧ ಹೇರ್ ಮಾಸ್ಕ್ಗಳ ತಯಾರಿಕೆಯಲ್ಲಿಯೂ ಇದನ್ನು ಬಳಸಬಹುದು. ನಾವು ಮನೆಯಲ್ಲಿ ನಿಂಬೆ ಎಣ್ಣೆಯನ್ನು ಸುಲಭವಾಗಿ ಬಳಸಬಹುದು. ಈ ನಿಂಬೆ ಎಣ್ಣೆಯನ್ನು ವಾರಕ್ಕೆ ಎರಡು ಬಾರಿ ಬಳಸುವುದರಿಂದ ಕೂದಲು ದಟ್ಟವಾಗಿ ಮತ್ತು ಉದ್ದವಾಗಿ ಬೆಳೆಯುತ್ತದೆ.

ನಿಂಬೆ ಎಣ್ಣೆಯು ಆಂಟಿಫಂಗಲ್, ಬ್ಯಾಕ್ಟೀರಿಯಾ ವಿರೋಧಿ, ಆಂಟಿಮೈಕ್ರೊಬಿಯಲ್ ಮತ್ತು ಉರಿಯೂತದ ಗುಣಲಕ್ಷಣಗಳನ್ನು ಹೊಂದಿದೆ. ಅವರು ಕೂದಲಿಗೆ ಉತ್ತಮ ಕಂಡಿಷನರ್ ಆಗಿ ಕಾರ್ಯನಿರ್ವಹಿಸುತ್ತದೆ. ನಿಂಬೆ ಎಣ್ಣೆಯನ್ನು ನಿಂಬೆ ಸಿಪ್ಪೆಯಿಂದ ತಯಾರಿಸಲಾಗುತ್ತದೆ. ಇವುಗಳನ್ನು ನೇರವಾಗಿ ಕೂದಲಿಗೆ ಹಚ್ಚುವುದರಿಂದ ನೆತ್ತಿಯಲ್ಲಿ ತುರಿಕೆಯಂತಹ ಸಮಸ್ಯೆಗಳು ಕಡಿಮೆಯಾಗುತ್ತವೆ. ಇವುಗಳನ್ನು ರೋಸ್ಮೆರಿ ಮತ್ತು ತೆಂಗಿನ ಎಣ್ಣೆಯಂತಹ ಎಣ್ಣೆಗಳೊಂದಿಗೆ ಹಚ್ಚಬಹುದು.

ಇದನ್ನು ನಿಯಮಿತವಾಗಿ ಬಳಸುವುದರಿಂದ ಮೊಡವೆಗಳ ಸಮಸ್ಯೆ ಕಡಿಮೆಯಾಗುತ್ತದೆ. ಇದು ಸೋಂಕಿನ ಸಮಸ್ಯೆಗೂ ಪರಿಣಾಮಕಾರಿಯಾಗಿ ಕೆಲಸ ಮಾಡುತ್ತದೆ. ಇದು ಕೂದಲಿನ ಮೇಲೆ ಬ್ಯಾಕ್ಟೀರಿಯಾ ಮತ್ತು ಶಿಲೀಂಧ್ರಗಳ ಬೆಳವಣಿಗೆಯನ್ನು ತಡೆಯುತ್ತದೆ. ನಿಂಬೆ ಎಣ್ಣೆಯು ಉರಿಯೂತದ ಗುಣಲಕ್ಷಣಗಳಲ್ಲಿ ಸಮೃದ್ಧವಾಗಿದೆ. ಇದನ್ನು ಟೀ ಟ್ರೀ ಆಯಿಲ್ ಜೊತೆಗೆ ಕೂದಲಿಗೆ ಹಚ್ಚುವುದರಿಂದ ನಿಮಗೆ ಡಬಲ್ ಲಾಭ ಸಿಗುತ್ತದೆ.

ಕ್ಯಾಸ್ಟರ್ ಆಯಿಲ್ ಅಥವಾ ಆಲಿವ್ ಎಣ್ಣೆಯ ಜೊತೆಗೆ ನಿಂಬೆ ಎಣ್ಣೆಯನ್ನು ಬಳಸುವುದರಿಂದ ಕೂದಲಿನ ಬೆಳವಣಿಗೆಯೊಂದಿಗೆ ಕೂದಲು ಉದುರುವಿಕೆಯ ಸಮಸ್ಯೆಯನ್ನು ಕಡಿಮೆ ಮಾಡಬಹುದು. ಏಕೆಂದರೆ ಇದು ಉತ್ಕರ್ಷಣ ನಿರೋಧಕ ಮತ್ತು ಬ್ಯಾಕ್ಟೀರಿಯಾ ವಿರೋಧಿ ಗುಣಗಳಿಂದ ಸಮೃದ್ಧವಾಗಿದೆ. ಕ್ಯಾಸ್ಟರ್ ಆಯಿಲ್ನೊಂದಿಗೆ ಮಿಶ್ರಣ ಮಾಡುವುದರಿಂದ ರಕ್ತ ಪರಿಚಲನೆ ಸುಧಾರಿಸುತ್ತದೆ. ಕೂದಲಿಗೆ ಜೀವವನ್ನು ನೀಡುತ್ತದೆ ಮತ್ತು ಹಾನಿಯಾಗದಂತೆ ರಕ್ಷಿಸುತ್ತದೆ. ಇದರಿಂದ ಕೂದಲಿನ ತುದಿ ಸೀಳುವ ಸಮಸ್ಯೆ ಬರುವುದಿಲ್ಲ.

# ಇಕಾಮ್ ಎಕ್ಸ್ಪ್ರೆಸ್ ಲಿಮಿಟೆಡ್ 2600 ಕೋಟಿ ರೂಪಾಯಿ ಐಪಿಒ ಬಿಡುಗಡೆಗೆ ಸೆಬಿಗೆ ಡಿಆರ್ಹೆಚ್ಪಿ ಸಲ್ಲಿಕೆ

ಇಕಾಮ್ ಎಕ್ಸ್ಪ್ರೆಸ್ ಲಿಮಿಟೆಡ್ ಆರ್ಥಿಕ ವರ್ಷ 2024 ರಂತೆ ಭಾರತದ ಏಕೈಕ ಜನಪ್ರಿಯ ಃ2ಅ ಇ-ಕಾಮರ್ಸ್ ಲಾಜಿಸ್ಟಿಕ್ಸ್ ಪರಿಹಾರ ಪೂರೈಕೆದಾರರಾಗಿದೆ (ಮೂಲ: ರೆಡ್ಸೀರ್ ವರದಿ). ಇಕಾಮ್ ಎಕ್ಸ್ಪ್ರೆಸ್ ಭಾರತದಾದ್ಯಂತ ಇದು ಮಾರ್ಚ್ 31, 2024 ಕ್ಕೆ ಕೊನೆಗೊಂಡಂತೆ 27,000 ಕ್ಕೂ ಹೆಚ್ಚು ಪಿನ್ ಕೋಡ್ಗಳಲ್ಲಿ ಸೇವೆಯನ್ನು ಒದಗಿಸುತ್ತಿದೆ. (ಮೂಲ: ರೆಡ್ಸೀರ್ ವರದಿ.) ಇದು 317 ನೆಟ್ವರ್ಕ್ನೊಂದಿಗೆ (ವಿಂಗಡಣೆ ಕೇಂದ್ರಗಳು, ಸಂಸ್ಕರಣಾ ಕೇಂದ್ರಗಳು, ರಿಟರ್ನ್ ಸೆಂಟರ್ಗಳು ಮತ್ತು ನೆರವೇರಿಕೆ ಕೇಂದ್ರಗಳನ್ನೂ ಒಳಗೊಂಡಿದೆ. ) ಮಾರ್ಚ್ 31, 2024 ಕ್ಕೆ ಕೊನೆಗೊಂಡಂತೆ 3421 ಡೆಲಿವರಿ ಸೆಂಟರ್ ಹೊಂದಿರುವ ಇಕಾಮ್ ಎಕ್ಸ್ಪ್ರೆಸ್ ಕವರ್ ಒಟ್ಟಾರೆಯಾಗಿ ಭಾರತದ ಜನಸಂಖ್ಯೆಯ ಸರಿಸುಮಾರು 97% ರಷ್ಟನ್ನು ನಿತ್ಯ ತಲುಪುತ್ತಿದೆ.

ಇಕಾಮ್ ಎಕ್ಸ್ಪ್ರೆಸ್ ಲಿಮಿಟೆಡ್ (ಇಇಎಲ್ ಅಥವಾ ದಿ ಕಂಪನಿ), ತನ್ನ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿಆರ್ಹೆಚ್ಪಿ) ಅನ್ನು ಮಾರುಕಟ್ಟೆ ನಿಯಂತ್ರಕ ಸೆಕ್ಯುರಿಟೀಸ್ ಮತ್ತು ಎಕ್ಸ್ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ) ಗೆ ಒಟ್ಟು ನೀಡಿಕೆಯ ಆರಂಭಿಕ ಸಾರ್ವಜನಿಕ ಕೊಡುಗೆಗಳ ಮೂಲಕ ಹಣವನ್ನು ಸಂಗ್ರಹಿಸಲು ಸಲ್ಲಿಸಿದೆ ಈಕ್ವಿಟಿ ಷೇರುಗಳ ಗಾತ್ರ (ಪ್ರತಿಯೊಂದು ಮುಖಬೆಲೆ 1) 26,000 ಮಿಲಿಯನ್ (2,600 ಕೋಟಿ). (ಒಟ್ಟು ಸಂಚಿಕೆ ಗಾತ್ರ)

ಈ ಕೊಡುಗೆಯು 12,845 ಮಿಲಿಯನ್ 1284.50 ಕೋಟಿ ವರೆಗಿನ ಹೊಸ ಇಕ್ವಿಟಿ ಷೇರುಗಳನ್ನು ಒಳಗೊಂಡಿದೆ (''ತಾಜಾ ಸಂಚಿಕೆ'') ಮತ್ತು ಮಾರಾಟ ಮಾಡುವ ಷೇರುದಾರರಿಂದ 13,155.00 ಮಿಲಿಯನ್ (1,315.50 ಕೋಟಿಗೆ ಒಟ್ಟು ಮೊತ್ತದ ಮಾರಾಟದ ಕೊಡುಗೆಯನ್ನು ಒಳಗೊಂಡಿದೆ.

ಕಂಪನಿಯು ನಿವ್ವಳ ಆದಾಯವನ್ನು ಮುಂದೆ ನೀಡಿರುವ ನಿಧಿಯ ಕಡೆಗೆ ಬಳಸಿಕೊಳ್ಳಲು ಪ್ರಸ್ತಾಪಿಸುತ್ತದೆ – () ಯಾಂತ್ರೀಕೃತಗೊಂಡ ಹೊಸ ಸಂಸ್ಕರಣಾ ಕೇಂದ್ರಗಳ ಸ್ಥಾಪನೆಗೆ ಬಂಡವಾಳ ವೆಚ್ಚ ಮತ್ತು ಹೊಸ ನೆರವೇರಿಕೆ ಕೇಂದ್ರಗಳ ಅಂದಾಜು ಮೊತ್ತ 3874.41 ಮಿಲಿಯನ್ 387.44 ಕೋಟಿಗಳು () ತಂತ್ರಜ್ಞಾನದ ವರ್ಧನೆಯಲ್ಲಿ ಹೂಡಿಕೆ ಮತ್ತು ಕ್ಲೌಡ್ ಇನ್ಫ್ರಾಸ್ಟ್ರಕ್ಚರ್ ಸೇರಿದಂತೆ ಡೇಟಾ ವಿಜ್ಞಾನದ ಸಾಮರ್ಥ್ಯಗಳು ಅಂದಾಜು ಮೊತ್ತ 737.12 ಮಿಲಿಯನ್ 73.71 ಕೋಟಿ () ಕ್ಲೌಡ್ ಮೂಲಸೌಕರ್ಯ ಸೇರಿದಂತೆ ತಾಂತ್ರಿಕ ಮತ್ತು ಡೇಟಾ ವಿಜ್ಞಾನದ ಸಾಮರ್ಥ್ಯಗಳ ವರ್ಧನೆಯಲ್ಲಿ ಹೂಡಿಕೆ ಅಂದಾಜು ಮೊತ್ತ 2,392.30 239.23 ಕೋಟಿ ರೂ. ಪೂರ್ವ ಪಾವತಿ (ತ) , ಪೂರ್ಣವಾಗಿ ಅಥವಾ ಭಾಗಶಃ, ಕಂಪನಿಯು ಪಡೆದ ಕೆಲವು ಸಾಲಗಳ ಪಾವತಿ ಸೇರಿದಂತೆ ಅದರ ಮೇಲೆ ಸಂಗ್ರಹವಾದ ಬಡ್ಡಿಯ ಅಂದಾಜು ಮೊತ್ತ 879.19 ಮಿಲಿಯನ್ 87.91 ಕೋಟಿ ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಬಾಕಿ ಮೊತ್ತ. (ಸಂಚಿಕೆಯ ವಸ್ತು) ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಮೂಲಕ ನೀಡಲಾಗುವ ಈಕ್ವಿಟಿ ಷೇರುಗಳನ್ನು ಬಿಎಸ್ಇ ಲಿಮಿಟೆಡ್ (ಬಿಎಸ್ಇ) ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ (ಎನ್ ಎಸ್ಇ) ನಲ್ಲಿ ಪಟ್ಟಿ ಮಾಡಲು ಪ್ರಸ್ತಾಪಿಸಲಾಗಿದೆ. (ಪಟ್ಟಿ ವಿವರಗಳು)

ಆಕ್ಸಿಸ್ ಕ್ಯಾಪಿಟಲ್ ಲಿಮಿಟೆಡ್, ಐಐಎಫ್ ಎಲ್ ಸೆಕ್ಯುರಿಟೀಸ್ ಲಿಮಿಟೆಡ್, ಕೋಟಕ್ ಮಹೀಂದ್ರಾ ಕ್ಯಾಪಿಟಲ್ ಕಂಪನಿ ಲಿಮಿಟೆಡ್ ಮತ್ತು ಯುಬಿಎಸ್ ಸೆಕ್ಯುರಿಟೀಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಈ ಸಮಸ್ಯೆಯ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್ಗಳಾಗಿವೆ.




# ಮಳೆಗಾಲ'ದಲ್ಲಿ ಪಾದದ ರಕ್ಷಣೆ

## ಬ್ಯೂಟಿ ಟಿಪ್ಸ್



ಮಳೆಗಾಲ ಸಾಮಾನ್ಯವಾಗಿ ಎಲ್ಲರಿಗೂ ಇಷ್ಟ. ಮಳೆಗಾಲ ಈಗಾಗಲೆ ಶುರುವಾಗಿದೆ.

ಮಳೆಗಾಲದಲ್ಲಿ ಆರೋಗ್ಯ ಸಮಸ್ಯೆಗಳು ಕಾಡುವುದು ಸಾಮಾನ್ಯ. ತೇವಾಂಶದಿಂದಾಗಿ ಪಾದಗಳು ಹಾಗೂ ಬೆರಳುಗಳ ಮಧ್ಯೆ ಕೊಳೆಯುವ ಸಮಸ್ಯೆ ಕೆಲವರನ್ನು ಕಾಡುತ್ತದೆ. ಮಳೆಗಾಲದಲ್ಲಿ ಕೆಲವೊಂದು ಸರಳ ಟಿಪ್ಸ್ ಅನುಸರಿಸಿ ಕಾಲಿನ ಸೌಂದರ್ಯವನ್ನು ಹೆಚ್ಚಿಸಿಕೊಳ್ಳಬಹುದು.

ಮಳೆಗಾಲದಲ್ಲಿ ಕಾಲಿಗೆ ಹೆಚ್ಚಿನ ಆರೈಕೆಯ ಅವಶ್ಯಕತೆ ಇದೆ. ದಿನದಲ್ಲಿ 2-3 ಬಾರಿ ಕಾಲನ್ನು ಸ್ವಚ್ಛವಾಗಿ ತೊಳೆದುಕೊಳ್ಳಿ. ಪ್ರತಿಬಾರಿ ಕಾಲು ತೊಳೆದ ನಂತ್ರ ಟವೆಲ್ ನಿಂದ ಕಾಲಿನಲ್ಲಿರುವ ನೀರನ್ನು ಕ್ಲೀನ್ ಮಾಡಿ. ಕಾಲು ತೊಳೆಯುವ ನೀರಿಗೆ ಚಿಟಕಿ ಉಪ್ಪು ಹಾಕುವುದು ಒಳ್ಳೆಯದು.

ಸುಂದರ ಹಾಗೂ ಮೃದು ಕಾಲುಗಳನ್ನು ಪಡೆಯಲು ರಾತ್ರಿ ಮಲಗುವ ಮೊದಲು ಉಗುರು ಬೆಚ್ಚಗಿನ ತೆಂಗಿನ ಎಣ್ಣೆಯನ್ನು ಪಾದಗಳಿಗೆ ಹಚ್ಚಿ ಮಸಾಜ್ ಮಾಡಿ.

ಈ ಋತುವಿನಲ್ಲಿ ಅನೇಕ ಮಹಿಳೆಯರ ಪಾದಗಳು ಬಿರುಕುಬಿಡುತ್ತವೆ. ಅಂತವರು ಪ್ರತಿದಿನ ನಿಂಬೆ ಹಣ್ಣಿನ ಸಿಪ್ಪೆಯನ್ನು ಪಾದದ ಬಿರುಕಿಗೆ ಹಚ್ಚಿಕೊಳ್ಳಿ. ನಿಂಬೆ ರಸವನ್ನು ಉಗುರು ಬೆಚ್ಚಗಿನ ನೀರಿಗೆ ಹಾಕಿ ಅದ್ರಲ್ಲಿ ಪಾದಗಳನ್ನಿಟ್ಟು 20 ನಿಮಿಷ ಹಾಗೆ ಬಿಡಿ. ನಂತ್ರ ಕಾಲನ್ನು ಸ್ವಚ್ಛಗೊಳಿಸಿಕೊಳ್ಳಿ.



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

# ರಾಶಿ ಭವಿಷ್ಯ

**ಮೇಷ:** ಉತ್ತಮ ಬುದ್ಧಿಶಕ್ತಿ, ಶರೀರದಲ್ಲಿ ಆತಂಕ, ಆರೋಗ್ಯದಲ್ಲಿ ಏರುಪೇರು, ಅತಿಯಾದ ಕೋಪ.

**ವೃಷಭ:** ವಿಧೇಯತೆಯೇ ಯಶಸ್ಸಿನ ಮೆಟ್ಟಿಲು, ತಾಯಿಯಿಂದ ಸಹಾಯ, ಅನ್ಯ ಜನರಲ್ಲಿ ದ್ವೇಷ. ವ್ಯಾಪಾರದಲ್ಲಿ ನಷ್ಟ, ಗುರುಗಳ ಸಲಹೆ,

**ಮಿಥುನ:** ದಿನಸಿ ವ್ಯಾಪಾರಿಗಳಿಗೆ ಲಾಭ, ಸ್ಥಿರಾಸ್ತಿ ಪ್ರಾಪ್ತಿ, ಮನೋವ್ಯಥೆ, ಸಾಮಾನ್ಯ ಸೌಖ್ಯಕ್ಕೆ ಧಕ್ಕೆ, ಮಾನಸಿಕ ಒತ್ತಡ.

**ಕಟಕ:** ಬುದ್ಧಿವಂತಿಕೆಯಿಂದ ಕೆಲಸ ಮಾಡುವಿರಿ, ನಂಬಿಕೆ ದ್ರೋಹ, ಪ್ರೀತಿ ಪಾತ್ರರ ಭೇಟಿ, ವಿವಾದಗಳಿಂದ ದೂರವಿರಿ.

**ಸಿಂಹ :** ದುಡುಕ ಸ್ವಭಾವ, ದೇವತಾ ಕಾರ್ಯಗಳಲ್ಲಿ ಭಾಗಿ, ಸ್ಥಳ ಬದಲಾವಣೆ, ಋಣ ಬಾಧೆಯಿಂದ ಮುಕ್ತಿ.

**ಕನ್ಯಾ:** ಸ್ತ್ರೀಯರಿಗೆ ಲಾಭ, ಸಕಾಲಕ್ಕೆ ಭೋಜನ ಇಲ್ಲದಿರುವಿಕೆ, ವ್ಯಾಪಾರದಲ್ಲಿ ನಷ್ಟ, ಗುರುಗಳ ಸಲಹೆ, ತಾಳ್ಮೆಯಿಂದ ವರ್ತಿಸಿ.

**ತುಲಾ:** ಮನೆಯಲ್ಲಿ ಸಂತಸ, ಆಹಾರದಲ್ಲಿ ವ್ಯತ್ಯಾಸ, ನಾನಾ ರೀತಿಯ ಸಂಕಷ್ಟ, ಅವಕಾಶಗಳು ಕೈ ತಪ್ಪುವುದು.

**ವೃಶ್ಚಿಕ:** ಮಾತಿಗೆ ಮರುಳಾಗಬೇಡಿ, ದೂರ ಪ್ರಯಾಣ, ಶತ್ರು ಭಾದೆ, ಸಲ್ಲದ ಅಪವಾದ, ಆರೋಗ್ಯ ವೃದ್ಧಿ

**ಧನಸ್ಸು:** ಎಲ್ಲರ ಮನಸ್ಸನ್ನು ಗೆಲುವಿರಿ, ಕೋಪ ಅನರ್ಥಕ್ಕೆ ಕಾರಣವಾಗುತ್ತೆ, ವಿದ್ಯಾರ್ಥಿಗಳಲ್ಲಿ ಯಶಸ್ಸು, ಮನಕ್ಲೇಶ.

**ಮಕರ:** ಅವಮಾನಕ್ಕೆ ಗುರಿಯಾಗುವಿರಿ, ನೆರೆಹೊರೆಯವರ ಸಹಕಾರ,ಅನಾರೋಗ್ಯ.

**ಕುಂಭ:** ಭೋಗ ವಸ್ತುಗಳು ಪ್ರಾಪ್ತಿ, ಗುರಿ ಸಾಧಿಸಲು ಶ್ರಮಪಡುವಿರಿ, ಸಣ್ಣ ವಿಷಯಕ್ಕೆ ಭಿನ್ನಾಭಿಪ್ರಾಯ.

**ಮೀನ:** ಕೆಟ್ಟ ಆಲೋಚನೆಯಿಂದ ಮೈಗಳತನ, ವಿನಾಕಾರಣ ನಿಷ್ಠುರ, ರಫ್ತು ವ್ಯಾಪಾರದಿಂದ ಅಧಿಕ ಲಾಭ.

# ಇಂಟರ್ನೆಟ್ ಸೆಲ್ಫ್ ಕೇರ್ ಡೇ

ಇಂಟರ್ನೆಟ್ ಸೆಲ್ಫ್-ಕೇರ್ ಡೇ ಅನ್ನು ಪ್ರತಿ ವರ್ಷ ಆಗಸ್ಟ್ 21 ರಂದು ಆಚರಿಸಲಾಗುತ್ತದೆ. ಈ ದಿನವು ನಿಮ್ಮ ಬಗ್ಗೆ ಕಾಳಜಿ ವಹಿಸಲು ಸಹಾಯ ಮಾಡುವ ಸಂಪನ್ಮೂಲಗಳನ್ನು ಹುಡುಕಲು ಇಂಟರ್ನೆಟ್ ಅನ್ನು ಬಳಸಲು ಸಮರ್ಪಿಸಲಾಗಿದೆ. ನಮ್ಮಲ್ಲಿ ಅನೇಕರು ಕೆಲಸದಲ್ಲಿ ಅಥವಾ ಮನೆಯಲ್ಲಿ ಇತರರನ್ನು ನೋಡಿಕೊಳ್ಳುವುದರಲ್ಲಿ ತೊಡಗಿಸಿಕೊಂಡಿದ್ದಾರೆ, ನಾವು ನಮ್ಮ ಬಗ್ಗೆ ಕಾಳಜಿ ವಹಿಸುವುದನ್ನು ಮರೆತುಬಿಡುತ್ತೇವೆ. ಆರೋಗ್ಯವನ್ನು ಉತ್ತೇಜಿಸುವ ಅಭ್ಯಾಸಗಳ ಮೂಲಕ ತನ್ನನ್ನು ತಾನೇ ಕಾಳಜಿ ವಹಿಸಿಕೊಳ್ಳುವುದು ಮತ್ತು ಅನಾರೋಗ್ಯದ ಸಕ್ರಿಯ ನಿರ್ವಹಣೆ ಎಂದು ಸ್ವಯಂ-ಆರೈಕೆ ವಿವರಿಸಲಾಗಿದೆ. ಸ್ವಯಂ-ಆರೈಕೆಯನ್ನು ನಿಯಮಿತವಾಗಿ ಅಭ್ಯಾಸ ಮಾಡಲು ಹಲವು ಮಾರ್ಗಗಳಿವೆ: ಉದಾಹರಣೆಗೆ ಆಹಾರದ ಆಯ್ಕೆಗಳು, ವ್ಯಾಯಾಮ, ನಿದ್ರೆ ಮತ್ತು ದಂತ ಆರೈಕೆಯ ಮೂಲಕ. ನಾವು ನಮ್ಮ ಬಬಲ್ ಸ್ನಾನದ ಆಚರಣೆಗಳು ಮತ್ತು 'ನನಗೆ ಸಮಯ' ಕುರಿತು ಮಾತನಾಡುವಾಗ, ಸ್ವಯಂ-ಆರೈಕೆಯು ಪ್ರಾಚೀನ ಬೇರುಗಳು ಮತ್ತು ಮೂಲಭೂತ ಇತಿಹಾಸವನ್ನು ಹೊಂದಿದೆ ಎಂದು ನಾವು ಆಗಾಗ್ಗೆ ಕಡೆಗಣಿಸುತ್ತೇವೆ. 'ಸ್ವಯಂ-ಆರೈಕೆ' ಎಂಬ ಪದವನ್ನು 1950 ರ ದಶಕದಲ್ಲಿ ರಚಿಸಲಾಯಿತು ಅಥವಾ ರಚಿಸಲಾಯಿತು. ಆರೈಕೆ ಮತ್ತು ಸಂರಕ್ಷಣೆಯ ಕ್ರಮಗಳ ಮೂಲಕ ಸಾಂಸ್ಥಿಕ ಜನರು ಸ್ವಯಂ-ಮೌಲ್ಯದ ಭಾವನೆಯನ್ನು ಹೇಗೆ ಬೆಳೆಸಿಕೊಳ್ಳಬಹುದು ಎಂಬುದನ್ನು ವ್ಯಕ್ತಪಡಿಸಲು ಆರಂಭದಲ್ಲಿ ಉದ್ದೇಶಿಸಲಾಗಿತ್ತು. 1960 ರ ದಶಕದಲ್ಲಿ, ನಾಗರಿಕ ಹಕ್ಕುಗಳ ಕಾರ್ಯಕರ್ತರಿಗೆ ಧನ್ಯವಾದಗಳು, ಪ್ರಾಥಮಿಕವಾಗಿ ಬ್ಲ್ಯಾಕ್ ಪ್ಯಾಂಥರ್ ಪಾರ್ಟಿ, ಈ ನುಡಿಗಟ್ಟು ವೈದ್ಯಕೀಯ ಸಮುದಾಯದಿಂದ ಸಾಮಾನ್ಯ ಜನರಿಗೆ ಹೋಯಿತು. ಕಾರ್ಯಕರ್ತರ ಆಯಾಸವನ್ನು ಎದುರಿಸುವ ಮಾರ್ಗವಾಗಿ ಸ್ವಯಂ-ಆರೈಕೆ ಪ್ರಸಿದ್ಧವಾಯಿತು. 2018 ರ ಂಈಖಔಕಗಓಏ ಸಂದರ್ಶನದಲ್ಲಿ, ನಾಗರಿಕ ಹಕ್ಕುಗಳ ಕಾರ್ಯಕರ್ತ ಏಂಜೆಲಾ ಡೇವಿಸ್ ಹೀಗೆ ಹೇಳಿದರು: ದೀರ್ಘಕಾಲದವರೆಗೆ, ಕಾರ್ಯಕರ್ತರು ತಾವು ಏನು ತಿನ್ನುತ್ತಾರೆ, ಮಾನಸಿಕ ಸ್ವ-ಆರೈಕೆ, ಸಾಂಸ್ಕೃತಿಕ ಸ್ವ-ಆರೈಕೆಯ ವಿಷಯದಲ್ಲಿ ತಮ್ಮನ್ನು ತಾವು ಕಾಳಜಿ ವಹಿಸಿಕೊಳ್ಳುವುದು ಮುಖ್ಯವೆಂದು ಭಾವಿಸಿರಲಿಲ್ಲ. ಆಧ್ಯಾತ್ಮಿಕ ಸ್ವ-ಆರೈಕೆ. ಉದಾಹರಣೆಗೆ, 1966 ರಲ್ಲಿ ಸಹಸಂಸ್ಥಾಪಕರಾದ ಹ್ಯೂಯ್ ನ್ಯೂಟನ್ ಮತ್ತು ಬಾಬಿ ಸೀಲ್ ವಿವರಿಸಿದ ಪ್ಯಾಂಥರ್ಸ್ನ ಪ್ರಸಿದ್ಧ ಟೆನ್-ಪಾಯಿಂಟ್ ಪ್ರೋಗ್ರಾಂ, ಆತ್ಮರಕ್ಷಣೆಯನ್ನು ಮೂಲಭೂತ ಅಂಶವಾಗಿ ಒಳಗೊಂಡಿತ್ತು. ಪರಿಣಾಮವಾಗಿ, 1972 ರಲ್ಲಿ ಹತ್ತು-ಪಾಯಿಂಟ್ ಪ್ರೋಗ್ರಾಂ ಅನ್ನು ಪರಿಷ್ಕರಿಸುವ ಹೊತ್ತಿಗೆ ವೈದ್ಯಕೀಯ ವರ್ಣಭೇದ ನೀತಿಯು ಹೆಚ್ಚಿನ ಗಮನವನ್ನು ಗಳಿಸಿತು. ಹಿಂಸಾತ್ಮಕ ಯೋಧರಂತೆ ಬ್ಲ್ಯಾಕ್ ಪ್ಯಾಂಥರ್ ಪಾರ್ಟಿಯ ಚಿತ್ರಣವು ಕಪ್ಪು ಜನರ ಆರೋಗ್ಯವನ್ನು ರಕ್ಷಿಸುವ ಅಗತ್ಯದಿಂದ ಹುಟ್ಟಿಕೊಂಡಿತು. ಕಾರ್ಯಕರ್ತ ಆಡ್ರೆ ಲಾರ್ಡ್ ತನ್ನ ಪುಸ್ತಕ ಎ ಬರ್ಸ್ಟ್ ಆಫ್ ಲೈಟ್: ಅಂಡ್ ಅದರ್ ಎಸ್ಸೇಸ್ ನಲ್ಲಿ ಸ್ವಯಂ-ಆರೈಕೆ ಮತ್ತು ನಾಗರಿಕ ಹಕ್ಕುಗಳ ಅಂತರ್ಸಂಪರ್ಕವನ್ನು ಒತ್ತಿಹೇಳಿದರು, ಇದು ಅಂದಿನಿಂದ ಕಪ್ಪು ಸ್ತ್ರೀ ಗುರುತಿನ ತತ್ವವಾಗಿದೆ. ಇಂದು, ಸ್ವ-ಆರೈಕೆ ಮಾರುಕಟ್ಟೆಯು ಅಂದಾಜು 10 ಶತಕೋಟಿ ಮೌಲ್ಯದ್ದಾಗಿದೆ, ಸೌಂದರ್ಯ ಉದ್ಯಮದ ಗಣನೀಯ ಪಾಲನ್ನು ಹೊಂದಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಮಾತಾಡೋ ಗೊಂಬೆಯ 'ಡಿಂಕು' ಸಿನಿಮಾ



ಷಡ್ಯಂತ್ರ, ರೆಡ್ ಹೀಗೆ ವಿಭಿನ್ನ ಜಾನರ್ ಚಿತ್ರಗಳನ್ನು ನಿರ್ದೇಶಿಸಿದ ರಾಜೇಶ್ ಮೂರ್ತಿ ಅವರು ಈಸಲ ಸಸ್ಪೆನ್ಸ್, ಫ್ಯಾಂಟಸಿ ಜಾನರ್ ಚಲನ ಚಿತ್ರವನ್ನು ತೆರೆಗೆ ತರುತ್ತಿದ್ದಾರೆ. ಆ ಚಿತ್ರದ ಹೆಸರು ಡಿಂಕು. ಇದು ಅವರ ನಿರ್ದೇಶನದ ಹತ್ತನೇ ಚಿತ್ರ. ಈ ಚಿತ್ರದಲ್ಲಿ ರಾಜೇಶ್ ಮೂರ್ತಿ ಅವರ ಪುತ್ರ ಯಶಸ್ವಾ ನಾಯಕನಾಗಿ ನಟಿಸಿದ್ದಾರೆ. ಜೊತೆಗೆ ಈ ಚಿತ್ರದ ಕಥೆ, ಚಿತ್ರಕಥೆ ಹಾಗೂ ಸಂಭಾಷಣೆಗಳನ್ನು ಕೂಡಾ ಬರೆದಿದ್ದಾರೆ.

ಪಪ್ಪೆಟ್ ಷೋ ನಡೆಸುವ ಯುವತಿ ಹಾಗೂ ಆಕೆಯ ಪ್ರೀತಿಯ ಗೊಂಬೆಯಾದ ಡಿಂಕು ಸುತ್ತ ನಡೆಯುವ ಇಂಟರೆಸ್ಟಿಂಗ್ ಘಟನೆಗಳೇ ಈ ಚಿತ್ರದ ಪ್ರಮುಖ ಕಥಾವಸ್ತು, ಈ ಚಿತ್ರದಲ್ಲಿ ಯುವಪ್ರತಿಭೆ ಯಶಸ್ವಾ ನಾಯಕನ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಯಶಸ್ವಾ ಈಗಾಗಲೇ ಒಂದು ಚಿತ್ರದಲ್ಲಿ ನಟಿಸುವ ಮೂಲಕ ಕನ್ನಡಿಗರಿಗೆ ಚಿರಪರಿಚಿತರಾಗಿದ್ದಾರೆ. ಅಲ್ಲದೆ ಯುವನಟಿ ಸನ್ನಿಧಿ ಚಿತ್ರದ ನಾಯಕಿಯಾಗಿ ನಟಿಸಿದ್ದಾರೆ.

ಚಿತ್ರದಲ್ಲಿ ಗೊಂಬೆಯ ಹೆಸರೇ ಡಿಂಕು. ಅದು ಮಾತಾಡುತ್ತದೆ. ಹಾಗಂತ ಇದೊಂದು ಹಾರರ್ ಚಿತ್ರವಲ್ಲ. ಸಸ್ಪೆನ್ಸ್ ಜೊತೆಗೆ ಕಾಮಿಡಿಯೂ ಚಿತ್ರದಲ್ಲಿದೆ. ಡಿಂಕು ಚಿತ್ರಕ್ಕೆ ಬೆಂಗಳೂರು ಸುತ್ತಮುತ್ತ ಚಿತ್ರೀಕರಣ ನಡೆಸಲಾಗಿದ್ದು, ಚಿತ್ರದ ಎಡಿಟಿಂಗ್ ಕಾರ್ಯ ಮುಗಿದು ಡಬ್ಬಿಂಗ್ ಕೊನೆಯ ಹಂತದಲ್ಲಿದೆ. ಕನ್ನಡದ ಹಿರಿಯ ನಿರ್ಮಾಪಕ ಹಾಗೂ ಛಾಯಾಗ್ರಾಹಕರೂ ಆಗಿದ್ದ ಹೆಚ್.ಎಂ.ಕೆ. ಮೂರ್ತಿ ಅವರ ಮೊಮ್ಮಗನೂ ಆದ ಯಶಸ್ವಾ ಅವರು ಈಗಾಗಲೇ ಅಗ್ನಿಲೋಕ ಎಂಬ ಚಿತ್ರದಲ್ಲಿ ನಟಿಸೋ ಮೂಲಕ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟಿದ್ದರು. ಡಿಂಕು ಅವರ ಅಭಿನಯದ ಎರಡನೇ ಚಿತ್ರ.

ನೆಲ ಮಹೇಶ್ ಹಾಗೂ ನೇವಿ ಮಂಜು ಸೇರಿ ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ. ಇನ್ನು ಈ ಚಿತ್ರದಲ್ಲಿ 4 ಫೈಟ್ಸ್ ಇದ್ದು ಗಿರೀಶ್ ಎ.ಪಿ. ಅವರು ಕಂಪೋಜ್ ಮಾಡುತ್ತಿದ್ದಾರೆ. ಚಿತ್ರದ ಎರಡು ಹಾಡುಗಳಿಗೆ ನಿತೀಶ್ ಕುಮಾರ್ ಅವರು ಸಂಗೀತ ಸಂಯೋಜನೆ ಮಾಡುತ್ತಿದ್ದಾರೆ. ಬರುವ ಸೆಪ್ಟೆಂಬರ್ ವೇಳೆಗೆ ಡಿಂಕು ಚಿತ್ರವನ್ನು ರಿಲೀಸ್ ಮಾಡೋ ಯೋಚನೆಯಿದೆ ಎಂದು ನಿರ್ದೇಶಕರಾದ ರಾಜೇಶ್ ಮೂರ್ತಿ ಅವರು ತಿಳಿಸಿದ್ದಾರೆ.

# ಬೇಬಿ ಬಂಪ್ ಫೋಟೋಶೂಟ್‌ನಲ್ಲಿ ಮಿಂಚಿದ ಮಿಲನಾ ನಾಗರಾಜ್



ಸ್ಯಾಂಡಲ್‌ವುಡ್ ನಟಿ ಮಿಲನಾ ನಾಗರಾಜ್ ಮತ್ತು ಡಾರ್ಲಿಂಗ್ ಕೃಷ್ಣ ದಂಪತಿ ಅವರು ಮೊದಲ ಮಗುವಿನ ಬರುವಿಕೆಯ ನಿರೀಕ್ಷೆಯಲ್ಲಿದ್ದಾರೆ. ಸೀಮಂತ ಶಾಸ್ತ್ರ ಅದ್ಧೂರಿಯಾಗಿ ನೆರವೇರಿದ ಬೆನ್ನಲ್ಲೇ ಮಸ್ತ್ ಆಗಿ ಬೇಬಿ ಬಂಪ್ ಫೋಟೋಶೂಟ್ ಹಂಚಿಕೊಂಡಿದ್ದಾರೆ.

ನೀನು ಹುಟ್ಟೋದಕ್ಕೂ ಮುಂಚೆ ನಾನು ರಾಣಿಯಂತೆ ಫೀಲ್ ಮಾಡುತ್ತಿದ್ದೇನೆ ಎನ್ನುತ್ತಾ ಮಗುವಿನ ಬರುವಿಕೆಯ ಕಾತುರತೆಯನ್ನು ಸೋಷಿಯಲ್ ಮೀಡಿಯಾದಲ್ಲಿ ನಟಿ ವ್ಯಕ್ತಪಡಿಸಿದ್ದಾರೆ.

ರೋಸ್ ಕಲರ್ ಗೌನ್ ಧರಿಸಿ, ಕುತ್ತಿಗೆಗೆ ಮುತ್ತಿನ ಸರ ಹಾಕಿ ಬೇಬಿ ಬಂಪ್ ಫೋಟೋಶೂಟ್ ಮಾಡಿಸಿದ್ದು, ನಟಿ ಮುದ್ದಾಗಿ ಕಾಣಿಸಿಕೊಂಡಿದ್ದಾರೆ. ಏಂಜಲ್ ನಂತೆ ಮಿಂಚುತ್ತಿರುವ ನಟಿಗೆ ಕ್ಯೂಟ್, ಬ್ಯೂಟಿಫುಲ್ ಅಂತ ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬರುತ್ತಿವೆ. ಜ್ಯೂನಿಯರ್ ನಿಧಿಮಾಗಾಗಿ ಕಾಯುತ್ತಿರೋದಾಗಿ ಫ್ಯಾನ್ಸ್ ಕಾಮೆಂಟ್ ಮಾಡಿದ್ದಾರೆ.

ತಾಯಿಯಾಗುತ್ತಿರುವ ಮಿಲನಾ ಸದ್ಯ ಯಾವುದೇ ಸಿನಿಮಾವನ್ನು ಒಪ್ಪಿಕೊಂಡಿಲ್ಲ. 'ಲವ್ ಮಾಕ್ಟೈಲ್ 3' ಸಿನಿಮಾ ಕೆಲಸ ನಡೆಯುತ್ತಿದೆ. ಆದರೆ ಈ ಪ್ರಾಜೆಕ್ಟ್ ಇನ್ನೂ ಶುರು ಆಗೋದು ಮುಂದಿನ ವರ್ಷ ಎನ್ನಲಾಗಿದೆ. ಡಾರ್ಲಿಂಗ್ ಕೃಷ್ಣ 'ಫಾದರ್' ಎಂಬ ಸಿನಿಮಾದಲ್ಲಿ ಬ್ಯುಸಿಯಾಗಿದ್ದಾರೆ.

ಇನ್ನೂ 'ಲವ್ ಮಾಕ್ಟೈಲ್ 1' ಮತ್ತು 'ಲವ್ ಮಾಕ್ಟೈಲ್ 2' ಈ ಎರಡು ಸಿನಿಮಾಗಳು ಕೃಷ್ಣ ಮತ್ತು ಮಿಲನಾ ದಂಪತಿಗೆ ಸಕ್ಸಸ್ ಕೊಟ್ಟಿದೆ. ಇದರ ಮುಂದಿನ ಸೀಕ್ವೆಲ್ ಬಗ್ಗೆ ಫ್ಯಾನ್ಸ್‌ಗೆ ನಿರೀಕ್ಷೆಯಿದೆ.

# ಪ್ರಭಾಸ್‌ಗೆ ವಿಲನ್ ಆದ ತ್ರಿಷಾ



'ಕಲ್ಕಿ' ಸಿನಿಮಾದ ಸಕ್ಸಸ್ ಅಲೆಯಲ್ಲಿ ತೇಲುತ್ತಿರುವ ಪ್ರಭಾಸ್ ಇದೀಗ ಸಾಲು ಸಾಲು ಸಿನಿಮಾಗಳಲ್ಲಿ ನಟಿಸುತ್ತಿದ್ದಾರೆ. ಇದರ ನಡುವೆ ಪ್ರಭಾಸ್ ಮುಂಬರುವ ಸಿನಿಮಾ ಬಗ್ಗೆ ಇಂಟರೆಸ್ಟಿಂಗ್ ಅಪ್‌ಡೇಟ್‌ವೊಂದು ಸಿಕ್ಕಿದೆ. ಪ್ರಭಾಸ್‌ಗೆ ವಿಲನ್ ಆಗಿ ನಟಿ ತ್ರಿಷಾ ಕಾಣಿಸಿಕೊಳ್ಳಲಿದ್ದಾರೆ.

ತ್ರಿಷಾಗೆ ಚಿತ್ರರಂಗದಲ್ಲಿ ಬೇಡಿಕೆ ಹೆಚ್ಚಾಗಿದೆ. ಸಿನಿಮಾದಿಂದ ಸಿನಿಮಾಗೆ ಬಗೆ ಬಗೆಯ ಪಾತ್ರಗಳನ್ನು ನಟಿ ಆಯ್ಕೆ ಮಾಡಿಕೊಳ್ತಿದ್ದಾರೆ. 'ಸ್ಪಿರಿಟ್' ಸಿನಿಮಾದಲ್ಲಿ ಪ್ರಭಾಸ್ ಡಬಲ್ ರೋಲ್‌ನಲ್ಲಿ ನಟಿಸುತ್ತಿದ್ದಾರೆ. ಹೀರೋ ಮತ್ತು ವಿಲನ್ ಎರಡು ಪಾತ್ರಕ್ಕೆ ಪ್ರಭಾಸ್ ಜೀವ ತುಂಬಲಿದ್ದಾರೆ.

ವಿಲನ್ ಪ್ರಭಾಸ್ ಪಾತ್ರಕ್ಕೆ ತ್ರಿಷಾ ಜೋಡಿಯಾಗ್ತಿದ್ದಾರಂತೆ. ಅವರು ಕೂಡ ಲೇಡಿ ವಿಲನ್ ಆಗಿ ಮಿಂಚಲಿದ್ದಾರೆ ಎಂಬುದು ಸದ್ಯ ಹರಿದಾಡುತ್ತಿರುವ ಸುದ್ದಿ. ಈ ವಿಚಾರ ನಿಜನಾ? ಎಂಬುದನ್ನು ಚಿತ್ರತಂಡವೇ ಸ್ಪಷ್ಟನೆ ನೀಡಬೇಕಿದೆ.

ಇನ್ನೂ ತ್ರಿಷಾರನ್ನು ಈಗಾಗಲೇ 'ಅನಿಮಲ್' ನಿರ್ದೇಶಕ ಸಂದೀಪ್ ರೆಡ್ಡಿ ವಂಗಾ ಭೇಟಿಯಾಗಿ ಸಿನಿಮಾದ ಕಥೆ ಹೇಳಿದ್ದಾರೆ. ಸಿನಿಮಾ ಕುರಿತು ಮಾತುಕತೆಯಾಗಿದ್ದು, ಸದ್ಯದಲ್ಲೇ ಚಿತ್ರತಂಡ ಈ ಕುರಿತು ಘೋಷಣೆ ಮಾಡಬೇಕಿದೆ. ಸದ್ಯ 'ಸ್ಪಿರಿಟ್' ಸಿನಿಮಾದ ಪ್ರಿ ಪ್ರೊಡಕ್ಷನ್ ಕೆಲಸಗಳು ನಡೆಯುತ್ತಿದೆ.

ಪ್ರಭಾಸ್ ಮತ್ತು ತ್ರಿಷಾ ಇಬ್ಬರೂ ಬೇರೆ ಬೇರೆ ಪ್ರಾಜೆಕ್ಟ್‌ಗಳಲ್ಲಿ ಬ್ಯುಸಿಯಾಗಿದ್ದಾರೆ. 'ದಿ ರಾಜಾ ಸಾಬ್' ಸಿನಿಮಾದ ಬಳಿಕ ಸಂದೀಪ್ ರೆಡ್ಡಿ ವಂಗಾ ಜೊತೆ ಚಿತ್ರತಂಡ ಸೇರಿಕೊಳ್ಳಲಿದ್ದಾರೆ ಪ್ರಭಾಸ್. ಸದ್ಯ ಈ ಚಿತ್ರದ ಅಪ್‌ಡೇಟ್ ಕೇಳಿ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ.

# ಐಪಿಎಲ್‌ನಲ್ಲಿ ತನ್ನ ನೆಚ್ಚಿನ ಪ್ರತಿಸ್ಪರ್ಧಿ ತಂಡವನ್ನು ರಿವೀಲ್ ಮಾಡಿದ ಕೊಹ್ಲಿ



ಭಾರತದ ಸ್ಟಾರ್ ಇಂಡಿಯಾ ಆಟಗಾರ ವಿರಾಟ್ ಕೊಹ್ಲಿ ಐಪಿಎಲ್‌ನಲ್ಲಿ ತಮ್ಮ ನೆಚ್ಚಿನ ಪ್ರತಿಸ್ಪರ್ಧಿ ತಂಡ ಯಾವುದು ಎಂಬುವುದರ ಕುರಿತು ಇತ್ತೀಚಿಗೆ ಮಾತನಾಡಿದ್ದಾರೆ.

ಇತ್ತೀಚಿಗೆ ಒಂದು ಸಂದರ್ಶನದಲ್ಲಿ ಮಾತನಾಡಿದ ಅವರು, 5 ಬಾರಿ ಐಪಿಎಲ್ ಟ್ರೋಫಿ ಗೆದ್ದ ತಂಡ ಮುಂಬೈ ಇಂಡಿಯನ್ಸ್ ಹಾಗೂ 3 ಬಾರಿ ಗೆದ್ದ ತಂಡ ಕೋಲ್ಕತ್ತಾ ನೈಟ್ ರೈಡರ್ಸ್ ತಂಡಗಳ ನಡುವೆ ನಿಮ್ಮ ನೆಚ್ಚಿನ ಪ್ರತಿಸ್ಪರ್ಧಿ ಯಾವುದು ಎಂದು ಕೇಳಿದಕ್ಕೆ ಪ್ರತಿಕ್ರಿಯಿಸಿ, ನನಗೆ ಕೆಕೆಆರ್ ನೆಚ್ಚಿನ ಪ್ರತಿಸ್ಪರ್ಧಿ ತಂಡ ಎಂದು ಉತ್ತರಿಸಿದ್ದಾರೆ.

ಕಳೆದ ಭಾನುವಾರವಷ್ಟೇ ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ 16 ವರ್ಷಗಳನ್ನು ಪೂರೈಸಿದ ಕೊಹ್ಲಿಗೆ ಬಿಸಿಸಿಐ ಕಾರ್ಯದರ್ಶಿ ಜಯ್ ಶಾ 16 ವರ್ಷದ ಹಿಂದೆ ಅಂತರಾಷ್ಟ್ರೀಯ ಕ್ರಿಕೆಟ್‌ಗೆ ಕಾಲಿಟ್ಟ 19 ವರ್ಷದ ಯುವಕ. ಇಂದು 16 ವರ್ಷಗಳನ್ನು ಪೂರೈಸಿದ್ದಾರೆ. ಇದು ನಿಜವಾದ ವೃತ್ತಿಜೀವನದ ಆರಂಭ ಹಾಗೂ ಪೂರೈಸಿದ ರಾಜನಿಗೆ ಅಭಿನಂದನೆಗಳು ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಬರೆದು ಶುಭ ಹಾರೈಸಿದ್ದರು.

ಭಾರತದ ಶ್ರೇಷ್ಠ ಆಟಗಾರರಲ್ಲಿ ಒಬ್ಬರಾದ ವಿರಾಟ್ ಕೊಹ್ಲಿ 2008ರಲ್ಲಿ ಭಾರತ ಕ್ರಿಕೆಟ್ ತಂಡಕ್ಕೆ ಪಾದಾರ್ಪಣೆ ಮಾಡಿದ್ದಾರೆ. ತಮ್ಮ ಶಕ್ತಿಶಾಲಿ ಬ್ಯಾಟಿಂಗ್ ಪ್ರದರ್ಶಿಸುವ ಮೂಲಕ ಭಾರತ ತಂಡವನ್ನು ಉನ್ನತ ಮಟ್ಟಕ್ಕೆ ತೆಗೆದುಕೊಂಡು ಹೋಗಿದ್ದಾರೆ. ಜೊತೆಗೆ ಹಲವಾರು ದಾಖಲೆಗಳನ್ನು ಸೃಷ್ಟಿಸಿದ್ದಾರೆ.

ಕ್ರಿಕೆಟ್ ದಿಗ್ಗಜ ಸಚಿನ್ ತೆಂಡುಲ್ಕರ್ ಅವರ ದಾಖಲೆಯನ್ನು ವಿರಾಟ್ ಕೊಹ್ಲಿ ಮುರಿದು ಹೊಸ ದಾಖಲೆಯನ್ನು ನಿರ್ಮಿಸಿದ್ದಾರೆ. ಕೊಹ್ಲಿ 2008ರಲ್ಲಿ ಆರ್‌ಸಿಬಿ ತಂಡಕ್ಕೆ ಪಾದಾರ್ಪಣೆ ಮಾಡಿದ್ದಾರೆ. ಅಲ್ಲಿಂದ ಇಲ್ಲಿಯವರೆಗೂ ಬೇರೆ ತಂಡಕ್ಕೆ ಹೋಗದೇ ನಿರಂತರವಾಗಿ ಆರ್‌ಸಿಬಿ ತಂಡವನ್ನು ಪ್ರತಿನಿಧಿಸುತ್ತಿದ್ದಾರೆ.

## ಒಂದೇ ಓವರ್‌ನಲ್ಲಿ 39 ರನ್

# ಯುವರಾಜ್ ಸಿಂಗ್ ದಾಖಲೆ ಮುರಿದ ಡೇರಿಯಸ್

ಟಿ20 ಪಂದ್ಯವೊಂದರಲ್ಲಿ ಸೋಮೊವಾದ ಡೇರಿಯಸ್ ವಿಸ್ಸರ್ ಅವರು ಒಂದೇ ಓವರ್‌ನಲ್ಲಿ 39 ರನ್ ಬಾರಿಸುವ ಮೂಲಕ ಯುವರಾಜ್ ಸಿಂಗ್ ಅವರ ದಾಖಲೆ ಮುರಿದಿದ್ದಾರೆ.

ಸೋಮೊವಾ ತಂಡದ ಪರವಾಗಿ ಡೇರಿಯಸ್ ವಿಸ್ಸರ್ ಆಡುತ್ತಿದ್ದರು. ಅಪಿಯಾದಲ್ಲಿ ನಡೆಯುತ್ತಿರುವ ಟಿ20 ಪಂದ್ಯದಲ್ಲಿ ವನವಾಟು ತಂಡದ ವಿರುದ್ಧ ಆಟವಾಡಿದ ಅವರು 15ನೇ ಓವರ್‌ವೊಂದರಲ್ಲೇ 39 ರನ್ ಚಚ್ಚಿದ್ದರು. ಈ ಮೂಲಕ ಅವರು ಯುವರಾಜ್ ಸಿಂಗ್ ಮತ್ತು ಕ್ರಿಸ್ ಗೇಲ್ ಅವರ ದಾಖಲೆ ಮುರಿದಿದ್ದಾರೆ.

**39 ರನ್ ಹೇಗೆ?:** ನಳಿನ್ ನಿಪೀಕೊ ಎಸೆದ 15ನೇ ಓವರ್‌ನಲ್ಲಿ 39 ರನ್ ಬಂದಿದೆ. ನೀಪಿಕೊ ಎಸೆದ ಮೊದಲ ಮೂರು ಬಾಲ್‌ಗಳನ್ನು ವಿಸ್ಸರ್ ಹ್ಯಾಟ್ರಿಕ್ ಸಿಕ್ಸ್ ಬಾರಿಸಿದರು. ಇದರಿಂದ ಕೊಂಚ ಮಾನಸಿಕವಾಗಿ ಕುಗ್ಗಿದ ನೀಪಿಕೊ ನಾಲ್ಕನೇ ಎಸೆತ ನೋ ಬಾಲ್ ಹಾಕಿದರು. ನಂತರದ ಬಾಲ್ ಫ್ರೀ ಹಿಟ್ ಸಿಕ್ಕ ಕಾರಣ ವಿಸ್ಸರ್ ಮತ್ತೆ ಸಿಕ್ಸ್ ಸಿಡಿಸಿದರು.

ಐದನೇ ಬಾಲ್ ಡಾಟ್ ಆಗಿದ್ದರಿಂದ ವನವಾಟು ತಂಡದ ಆಟಗಾರರು ಸ್ವಲ್ಪ ನಿಟ್ಟುಸಿರು ಬಿಟ್ಟರು. ಆದರೆ ಅವರ ಸಂತಸ ಹೆಚ್ಚು ಸಮಯವಿರಲಿಲ್ಲ. ಆರನೇ ಎಸೆತ ನೋಬಾಲ್ ಆಗಿದ್ದರಿಂದ ಇತರೇ ರೂಪದಲ್ಲಿ 1 ರನ್ ಬಂತು. ನಂತರದ ಫ್ರಿ ಹಿಟ್ ಎಸೆತ ನೋಬಾಲ್ ಆಗಿದ್ದರಿಂದ 7 ರನ್ ಬಂತು.



ಕೊನೆಯ ಎಸೆತವನ್ನು ವಿಸ್ಸರ್ ಸಿಕ್ಸರ್‌ಗೆ ಅಟ್ಟಿದ ಪರಿಣಾಮ ಒಂದೇ ಓವರ್‌ನಲ್ಲಿ 39 ರನ್ ಬಂದಿದೆ.



2007ರಲ್ಲಿ ನಡೆದ ಮೊದಲ ಟಿ20 ವಿಶ್ವಕಪ್ ಕ್ರಿಕೆಟ್‌ನಲ್ಲಿ ಇಂಗ್ಲೆಂಡ್ ಬೌಲರ್ ಸ್ಟುವರ್ಟ್ ಬ್ರಾಡ್ ಅವರ 6 ಎಸೆತವನ್ನು ಸಿಕ್ಸರ್‌ಗೆ ಅಟ್ಟಿ ವಿಶ್ವ ದಾಖಲೆ ನಿರ್ಮಿಸಿದ್ದರು.

# ಹೆಚ್‌ಡಿಕೆ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರ ಮೊರೆ ಹೋದ ಎಸ್‌ಐಟಿ!

**ಬೆಂಗಳೂರು:** ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿ, ಹೈಕೋರ್ಟ್ ತಾತ್ಕಾಲಿಕ ರಿಲೀಫ್ ಕೊಟ್ಟಿದೆ. ಇದರ ಬೆನ್ನಲ್ಲೇ ಕೇಂದ್ರ ಸಚಿವ ಕುಮಾರಸ್ವಾಮಿ ವಿರುದ್ಧ ಭೂಅಕ್ರಮ ಮತ್ತು ಗಣಿಗುತ್ತಿಗೆ ಅಸ್ತ್ರ ಪ್ರಯೋಗ ಮಾಡಲು ಸರ್ಕಾರ ಸಿದ್ಧತೆ ನಡೆಸುತ್ತಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗ ಹೆಚ್‌ಡಿಕೆ ವಿರುದ್ಧ ಆರೋಪ ಪಟ್ಟಿಯನ್ನು ಸಲ್ಲಿಸಲು ಅನುಮತಿ ನೀಡುವಂತೆ ಎಸ್‌ಐಟಿ ಅನುಮತಿ ಕೋರಿದೆ.

ಹೆಚ್‌ಡಿಕೆ ವಿರುದ್ಧದ ಭೂಹಗರಣಗಳ ಮತ್ತು ಗಣಿ ಗುತ್ತಿಗೆ ಮಂಜೂರು ಆರೋಪ ಇದ್ದು ಲೋಕಾಯುಕ್ತ ವಿಶೇಷ ತನಿಖಾ ತಂಡ (ಗಣಿ ಹಗರಣಕ್ಕಂದೇ ಸಂಬಂಧಿಸಿದ್ದು) ಈ ಹಿಂದೆ ಪ್ರಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ರಾಜ್ಯಪಾಲರಲ್ಲಿ ಪತ್ರ ಬರೆದು ಮನವಿ ಮಾಡಿತ್ತು. ಇದೀಗ ಮತ್ತೆ ಚಾರ್ಜ್ ಶೀಟ್ ಸಲ್ಲಿಕೆಗೆ ಅನುಮತಿ ನೀಡಿ ಎಂದು ಆಗಸ್ಟ್ 19 ರಾಜ್ಯಪಾಲರಿಗೆ ದಾಖಲೆ ಸಮೇತ ಲೋಕಾಯುಕ್ತ ಎಸ್‌ಐಟಿ ಪ್ರಸ್ತಾವನೆ ಸಲ್ಲಿಸಿದೆ.

2014ರಿಂದ ಈ ಸಂಬಂಧ ತನಿಖೆ ನಡೆಸಿರುವ ಎಸ್‌ಐಟಿ ಲೋಕಾಯುಕ್ತರಿಗೆ ದಾಖಲೆ ಸಲ್ಲಿಸಿದ್ದು, ಕುಮಾರಸ್ವಾಮಿ ವಿರುದ್ಧ ಪ್ರಾಸಿಕ್ಯೂಷನ್ ಗೆ ಮನವಿ ಮಾಡಿದೆ. ಹೆಚ್‌ಡಿಕೆ ವಿರುದ್ಧ ಪ್ರಾಸಿಕ್ಯೂಷನ್‌ಗೆ ಎರಡು ಬಾರಿ ಲೋಕಾಯುಕ್ತ ಎಸ್‌ಐಟಿ ರಾಜ್ಯಪಾಲರಿಗೆ ಪತ್ರ ಬರೆದಿದೆ. ಮೊದಲನೇ ಪತ್ರ ನವೆಂಬರ್ 21, 2023 ರಂದು ಎಡಿಜಿಪಿ ಚಂದ್ರಶೇಖರ್ ಅವರು ಖುದ್ದಾಗಿ ಬರೆದಿದ್ದರು. ಆಗ ಹೆಚ್ಚಿನ ಮಾಹಿತಿ ನೀಡುವಂತೆ ರಾಜ್ಯಪಾಲರಿಂದ ಉತ್ತರ ಬಂದಿತ್ತು. ಆ ಪತ್ರ ಆಗಸ್ಟ್ 8, 2024ಕ್ಕೆ ಎಸ್‌ಐಟಿ ಕೈ ಸೇರಿದೆ. ಅದಕ್ಕೆ ಈಗ ಎರಡನೇ ಬಾರಿ ಸೋಮವಾರ ಪತ್ರ ಬರೆದಿದ್ದು, ತನಿಖೆ ಪೂರ್ಣಗೊಂಡಿದೆ. ಚಾರ್ಜ್ ಶೀಟ್ ಸಲ್ಲಿಕೆ ಮಾಡಬೇಕು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿ ಎಂದು ದಾಖಲೆ ಸಮೇತ ಮನವಿ ಮಾಡಲಾಗಿದೆ.



ಶ್ರೀ ಸಾಯಿ ವೆಂಕಟೇಶ್ವರ ಮಿನರಲ್ಸ್ ಎಂಬ ಸಂಸ್ಥೆಗೆ ಕುಮಾರಸ್ವಾಮಿ ನೆರವು ನೀಡಿದ್ದಾರೆ. ಮುಖ್ಯಮಂತ್ರಿಯಾಗಿದ್ದಾಗ 6.10.2007ರಂದು ಕಾನೂನು ಬಾಹಿರವಾಗಿ ನೆರವು ನೀಡಿದ್ದು, ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ಭಾವಿಹಳ್ಳಿ, ತಿಮ್ಮಪ್ಪಗುಡಿಯಲ್ಲಿ 550 ಎಕರೆ ಜಾಗವನ್ನು ಈ ಕಂಪೆನಿಗೆ ಅಕ್ರಮ ಗಣಿಗಾರಿಕೆಗೆ ಗುತ್ತಿಗೆ ನೀಡಿದ ಆರೋಪ ಇದೆ.

ಗುತ್ತಿಗೆ ನೀಡುವಾಗ ಮಿನರಲ್ಸ್ ಕನ್ಸಿಷನ್ ನಿಯಮ 59 (2)ನ್ನು ಉಲ್ಲಂಘನೆ ಮಾಡಿದ್ದು, ಈ ಅಕ್ರಮದ ಕುರಿತಾಗಿ ಎಫ್‌ಐಆರ್ ದಾಖಲಾಗಿ ಲೋಕಾಯುಕ್ತದಿಂದ ತನಿಖೆ ನಡೆದು ಎಚ್.ಡಿ.ಕುಮಾರಸ್ವಾಮಿಯವರು ತಪ್ಪೆಸಗಿದ್ದಾರೆ ಅಂತ ವರದಿ ಬಂದಿತ್ತು. ಹೀಗಾಗಿ ಲೋಕಾಯುಕ್ತದಿಂದ ಚಾರ್ಜ್‌ಶೀಟ್ ಸಲ್ಲಿಕೆಯಾಗಿ ನಂತರವೇ ಎಡಿಜಿಪಿಯವರು ರಾಜ್ಯಪಾಲರ ಬಳಿ ಪ್ರಾಸಿಕ್ಯೂಷನ್‌ಗೆ ಅನುಮತಿಗೆ ಪತ್ರ ಬರೆದಿದ್ದರು. ಆದರೂ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿಲ್ಲ ಎಂಬುದು ಕಾಂಗ್ರೆಸ್ ವಾದ.

2007 ರಲ್ಲಿ ಎಚ್‌ಡಿ ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ಆಗಿದ್ದ ಸಂದರ್ಭದಲ್ಲಿ ಶ್ರೀ ಸಾಯಿ ಮಿನರಲ್ಸ್ ಕಂಪನಿಗೆ ಗಣಿ ಮತ್ತು ಖನಿಜ ನಿಯಮ ಉಲ್ಲಂಘನೆ ಮಾಡಿ ಅಕ್ರಮವಾಗಿ ನೀಡಿರುವ ಆರೋಪವಿದೆ. ಅಂದಿನ ಲೋಕಾಯುಕ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆಯವರು ಈ ಸಂಬಂಧ 2011ರಲ್ಲಿ ಸಲ್ಲಿಸಿದ ವರದಿಯಲ್ಲಿ ಉಲ್ಲೇಖ ಇದೆ. ಇದರ ತನಿಖೆಯನ್ನು ಲೋಕಾಯುಕ್ತ ನಡೆಸುತ್ತಿದೆ. ಈ ತನಿಖೆಯನ್ನು ಮತ್ತೆ ಆರಂಭಿಸುವ ಮೂಲಕ ಕುಮಾರಸ್ವಾಮಿಗೆ ಟಕ್ಕರ್ ಕೊಡಲು ಕಾಂಗ್ರೆಸ್ ಸರ್ಕಾರ ಮುಂದಾಗಿದೆಯೇ ಎಂಬ ಗುಮಾನಿ ಎದ್ದಿದೆ.

ಹಾಗಿದ್ರೆ ಕುಮಾರಸ್ವಾಮಿಗೆ ಈ ಮೈನಿಂಗ್ ಲೈಸನ್ಸ್ ಉರುಳಾಗುತ್ತಾ? ಹರಗರಣ ನಡೆದಿದೆ ಎಂಬ ಸಮಯದಲ್ಲಿ ಹೆಚ್‌ಡಿಕೆ ಸಿಎಂ ಆಗಿದ್ದರು ಮತ್ತು ಈಗ ಕೇಂದ್ರದ ಮಂತ್ರಿಯಾಗಿರುವ ಕಾರಣ ಪ್ರಾಸಿಕ್ಯೂಷನ್ ಕೊಡುವ ಅಧಿಕಾರ ರಾಜ್ಯಪಾಲರಿಗೆ ಮಾತ್ರ ಇದೆ. ಇದೀಗ ಎರಡನೇ ಪತ್ರಕ್ಕೆ ರಾಜ್ಯಪಾಲರ ಉತ್ತರ ಏನೆಂಬುದು ಕಾದು ನೋಡಬೇಕಿದೆ. ಕೇವಲ ಕುಮಾರಸ್ವಾಮಿ ಮಾತ್ರವಲ್ಲ ಅಂದು ಇದ್ದ ಕೆಲ ಅಧಿಕಾರಿಗಳು ಕೂಡ ಈ ಹಗರಣದಲ್ಲಿ ಇದ್ದಾರೆನ್ನಲಾಗುತ್ತಿದೆ.

ಇದಿಷ್ಟೇ ಅಲ್ಲ ಎಚ್‌ಡಿ ಕುಮಾರಸ್ವಾಮಿ ಕುಟುಂಬದ ವಿರುದ್ಧದ ಭೂ ಅಕ್ರಮ ಆರೋಪ ಇದೆ. ಬಿಡದಿಯ ಕೇತಗಾನಹಳ್ಳಿಯಲ್ಲಿ ಗೋಮಾಳ ಜಮೀನನ್ನು ಅತಿಕ್ರಮಣ ಮಾಡಲಾಗಿದೆ ಎಂದು ಎಸ್ ಆರ್ ಹಿರೇಮಠ್ ಅವರು ಆರೋಪ ಮಾಡಿದ್ದು, ಇದರ ಬಗ್ಗೆ ಸಮಗ್ರ ತನಿಖೆಗೆ 2014 ರಲ್ಲೇ ಆದೇಶ ಮಾಡಲಾಗಿದೆ. ಮಂಜೂರಾತಿ ದಾಖಲೆ ಪತ್ರಗಳ ಸಿಗದಿದ್ದರೆ ತಪ್ಪಿತಸ್ಥರ ವಿರುದ್ಧ ನೋಟಿಸ್ ಮಾಡಿ ಸರ್ಕಾರ ಆ ಜಾಗವನ್ನು ವಶಕ್ಕೆ ಪಡೆದುಕೊಳ್ಳಬೇಕು ಎಂದು ಆದೇಶದಲ್ಲಿದೆ. ಈ ಬಗ್ಗೆಯೂ ತನಿಖೆ ನಡೆಯಬೇಕು ಆಗ್ರಹಿಸಲಾಗಿದೆ.

# ಮನೆಯೂಟ ಕೋರಿ ದರ್ಶನ್ ಮನವಿ

**ಬೆಂಗಳೂರು:** ಮನೆ ಊಟ ಕೋರಿ ದರ್ಶನ್ ಸಲ್ಲಿಸಲಾಗಿರುವ ಮನವಿಯ ಅರ್ಜಿಯನ್ನು ಹೈಕೋರ್ಟ್ ಸೆ.5ಕ್ಕೆ ಮುಂದೂಡಿದೆ.

» **ಸೆ.5ರವರೆಗೆ ಜೈಲೂಟವೇ ಗತಿ**

ನಿನ್ನೆ ನ್ಯಾ. ಎಂ ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠದಲ್ಲಿ ಅರ್ಜಿ ವಿಚಾರಣೆ ನಡೆಯಿತು. ಈ ವೇಳೆ ನ್ಯಾಯಾಲಯಕ್ಕೆ ಎಸ್‌ಪಿಪಿ ಪ್ರಸನ್ನ ಕುಮಾರ್ ಹಾಗೂ ದರ್ಶನ್ ಪರ ವಕೀಲ ಪ್ರಭುಲಿಂಗ ನಾವದಗಿ ಹಾಜರಾಗಿದ್ದರು. ಮನೆಯೂಟಕ್ಕೆ ಅವಕಾಶ ನೀಡುವಂತೆ ದರ್ಶನ್ ಮಾಡಿದ್ದ ಮನವಿಯನ್ನು ಕಾರಾಗೃಹ ಇಲಾಖೆಯ ಡಿಜಿಪಿ ಮಾಲಿನಿ ಕೃಷ್ಣಮೂರ್ತಿ ಅವರು ತಿರಸ್ಕರಿಸಿದ್ದಾರೆ. ಮನವಿ ವಜಾಗೊಂಡ ಹಿನ್ನೆಲೆಯಲ್ಲಿ ವಾದ ಮಂಡನೆಗೆ ಅವಕಾಶ ಕೋರಿ ಪ್ರಭುಲಿಂಗ ನಾವದಗಿ ಮನವಿ ಮಾಡಿದರು. ನಾವದಗಿ ಮನವಿ ಪುರಸ್ಕರಿಸಿದ ಕೋರ್ಟ್ ಸೆ.5ಕ್ಕೆ ವಿಚಾರಣೆಯನ್ನು ಮುಂದೂಡಿದೆ.



ದರ್ಶನ್ ಆರೋಗ್ಯ ಸ್ಥಿರವಾಗಿದೆ. ದರ್ಶನ್ ಅವರಿಗೆ ಮನೆಯೂಟ, ಹಾಸಿಗೆ, ಬಟ್ಟೆ ನೀಡಲು ಸಾಧ್ಯವಿಲ್ಲ. ಆರೋಪಿ ದರ್ಶನ್ ಆರೋಗ್ಯದಲ್ಲಿ ಯಾವುದೇ ಸಮಸ್ಯೆ ಇಲ್ಲ. ಮನೆಯೂಟ ಕೊಡುವ ಪರಿಸ್ಥಿತಿ ನಿರ್ಮಾಣ ಆಗಿಲ್ಲ ಎಂದು ಕಾರಾಗೃಹ ಡಿಜಿಪಿ ಮಾಲಿನಿ ಕೃಷ್ಣಮೂರ್ತಿ ಅವರು ಮನೆಯೂಟ ನಿರಾಕರಿಸಿ ಆದೇಶ ಹೊರಡಿಸಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com